# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ – 154 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ: 06–01–2025 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 154 | RNI No: KARKAN/2023/88462 | KA/SK/CTA-874/2024-2026 | Chitradurga | Date: 06-01-2025 Monday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಸರ್ಕಾರದಿಂದ ಪೊಲೀಸ್ ಇಲಾಖೆ ಬಲಪಡಿಸಲು ಕ್ರಮ: ಸಚಿವ ಡಿ.ಸುಧಾಕರ್ 2

ಜಿಲ್ಲೆಯ 3584 ರೈತರಿಗೆ ರೂ.2333.01 ಲಕ್ಷ ವಿಮಾ ಮೊತ್ತ ಬಿಡುಗಡೆ: ಜಿಲ್ಲಾಧಿಕಾರಿ 3

ಜನಮೆಚ್ಚುವಂತಹ ಆಡಳಿತವನ್ನು ಗ್ರಾಪಂ ಕೇಂದ್ರ ನೀಡುವಂತಾಗಬೇಕು: ಶಾಸಕ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ವಾಲ್ಮೀಕಿ ಜಾತ್ರೆ ಸಮಿತಿ ಚಿತ್ರದುರ್ಗ ತಾಲೂಕು ಅಧ್ಯಕ್ಷರಾಗಿ ಮಂಜುನಾಥ್ ನೇಮಕ

» ಚಿತ್ರದುರ್ಗ



ದಾವಣಗೆರೆ ಜಿಲ್ಲೆಯಲ್ಲಿ ಫೆಬ್ರವರಿ ತಿಂಗಳಲ್ಲಿ ನಡೆಯುವ ವಾಲ್ಮೀಕಿ ಜಾತ್ರೆ ಪ್ರಯುಕ್ತವಾಗಿ ಚಿತ್ರದುರ್ಗ ತಾಲೂಕಿನ ಜಾತ್ರೆ ಸಮಿತಿ ಅಧ್ಯಕ್ಷರನ್ನಾಗಿ ಚಿತ್ರದುರ್ಗ ಉದ್ಯಮಿಯಾದ ಮಂಜುನಾಥ್ ಅವರನ್ನು ಸ್ವಾಮೀಜಿ ನೇಮಕ ಮಾಡಿದ್ದಾರೆ. ಉದ್ಯಮಿ ಮಂಜುನಾಥ್ ಮಾತನಾಡಿ ಪ್ರತಿ ವರ್ಷದಂತೆ ಈ ವರ್ಷ ಸಹ ನಾಯಕ ಸಮಾಜದ ಹಳ್ಳಿಗಳಿಗೆ ತೆರಳಿ ವಾಲ್ಮೀಕಿ ಜಾತ್ರೆ ಸಂಘಟನೆ ಕುರಿತು ಚರ್ಚೆ ನಡೆಸಲಾಗುವುದು. ನಮ್ಮ ಸಮಾಜದ ಎಲ್ಲಾ ಮುಖಂಡರ ಜೊತೆ ಸೇರಿ ಜಾತ್ರೆ ಪ್ರೋತ್ಸಾಹ ನೀಡಲು ಮನವಿ ಮಾಡುತ್ತೇನೆ. ಸ್ವಾಮೀಜಿ ಸಲಹೆಯಂತೆ ಸಮಾಜದವನ್ನು ಜಾತ್ರೆಗೆ ಸಂಘಟನೆ ಮಾಡಲಾಗುತ್ತದೆ ಎಂದು ತಿಳಿಸಿದರು.

### ಮೈಸೂರು ಕಿಸಾನ್ ಮಾಲ್ ಸ್ಥಾಪನೆ: ಅರ್ಜಿ ಆಹ್ವಾನ


» ಚಿತ್ರದುರ್ಗ

ರಾಜ್ಯ ಸರ್ಕಾರ ಬಜೆಟ್‌ನಲ್ಲಿ ಪ್ರಸ್ತಾಪಿಸಿದಂತೆ, 2024–25ನೇ ಸಾಲಿನ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯ ತೋಟಗಾರಿಕೆ ಇಲಾಖೆ ಆವರಣದಲ್ಲಿ "ಮೈಸೂರು ಕಿಸಾನ್ ಮಾಲ್" ಸ್ಥಾಪಿಸಲು ಅರ್ಹ ರೈತ ಉತ್ಪಾದಕರ ಸಂಸ್ಥೆಯಿಂದ ಆಸಕ್ತಿ ಅಭಿವ್ಯಕ್ತಪಡಿಸುವಿಕೆಯನ್ನು ಆಹ್ವಾನಿಸಲಾಗಿದ್ದು, ಜನವರಿ 13 ಅರ್ಜಿ ಸಲ್ಲಿಕೆಗೆ ಕೊನೆಯ ದಿನ. ಕರ್ನಾಟಕ ಪಬ್ಲಿಕ್ ಪ್ರೊಕ್ಯುರ್‌ಮೆಂಟ್ ಪೋರ್ಟಲ್‌ನಲ್ಲಿ ಆಸಕ್ತ ರೈತರ ಉತ್ಪಾದಕ ಸಂಸ್ಥೆಯವರು ಇದೇ ಜ.13 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9449103240 ಗೆ ಸಂಪರ್ಕಿಸಬಹುದು ಎಂದು ತೋಟಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

### ಸಾಣೇಹಳ್ಳಿಯ ಶ್ರೀಗೆ "ಕಾಯಕಯೋಗಿ ಶ್ರೀ ಸಿದ್ಧರಾಮೇಶ್ವರ ಪ್ರಶಸ್ತಿ: ಸಚಿವ ಶಿವರಾಜ ತಂಗಡಗಿ

» ಚಿತ್ರದುರ್ಗ

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಆಯೋಜಿಸುವ ಕಾಯಕಯೋಗಿ ಶ್ರೀ ಸಿದ್ಧರಾಮೇಶ್ವರ ಜಯಂತಿ



ಸಂದರ್ಭದಲ್ಲಿ ನೀಡಲಾಗುವ ಕಾಯಕಯೋಗಿ "ಶ್ರೀ ಸಿದ್ಧರಾಮೇಶ್ವರ ಪ್ರಶಸ್ತಿ"ಗೆ ಪ್ರಸಕ್ತ ವರ್ಷ ಸಾಣೇಹಳ್ಳಿಯ ಶ್ರೀ ತರಳಬಾಳು ಜಗದ್ಗುರು ಶಾಖಾಮಠ ಪಟ್ಟಾಧ್ಯಕ್ಷರಾದ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿಯವರು ಆಯ್ಕೆಯಾಗಿದ್ದಾರೆ. ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಪ್ರಕಟಿಸಿದ್ದಾರೆ. ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿಗಳು ತಮ್ಮ ಪರಿಶ್ರಮ, ಜನಪರ ಕಾಳಜಿ, ವೈಚಾರಿಕತೆ, ರಂಗಾಸಕ್ತಿ ಹಾಗೂ ಸಾಹಿತ್ಯ ಕೃಷಿ ಮತ್ತು ಸಾಂಸ್ಕೃತಿಕ ಒಲವುಗಳ ಮೂಲಕ ಅವರು ಜನಮಾನಸದಲ್ಲಿ ಮನೆ ಮಾಡಿದ್ದಾರೆ. ಅವರು ಜೀವನಾದರ್ಶಗಳನ್ನು ಪರಿಗಣಿಸಿ ಅವರನ್ನು ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ತಿಳಿಸಿದರು. ಡಾ. ಮಲ್ಲಿಕಾಘಂಟಿ ಅವರ ಅಧ್ಯಕ್ಷತೆಯಲ್ಲಿ ರಚಿಸಲಾದ ಆಯ್ಕೆ ಸಮಿತಿಯು ಈ ಆಯ್ಕೆ ಮಾಡಿದೆ. ಪ್ರಶಸ್ತಿ 5 ಲಕ್ಷ ರೂಪಾಯಿ ನಗದು, ಸ್ಮರಣಿಕೆ ಹಾಗೂ ಪ್ರಶಸ್ತಿ ಫಲಕ ಒಳಗೊಂಡಿದೆ. ಜನವರಿ 14 ರಂದು ರವೀಂದ್ರ ಕಲಾಕ್ಷೇತ್ರದಲ್ಲಿ ನಡೆಯಲಿರುವ 'ಸಿದ್ಧರಾಮ ಜಯಂತಿ'ಯ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ಧರಾಮಯ್ಯ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ತಿಳಿಸಿದ್ದಾರೆ.

# ರಾಜ್ಯ ಮಟ್ಟದ ಯುವಜನೋತ್ಸವಕ್ಕೆ ಚಾಲನೆ

## ದೇಶಕ್ಕೆ ನನ್ನ ಕೊಡುಗೆ ಏನು ಎಂಬುದು ಯುವಕರ ಕರ್ತವ್ಯವಾಗಬೇಕು, ಧರ್ಮ ಹಾಗೂ ಜಾತಿ ಹೆಸರಿನಲ್ಲಿ ಶಾಂತಿಗೆ ಭಂಗ ತರುವ ದುಸ್ಕೃತ್ಯಗಳಿಗೆ ಮಾರು ಹೋಗಬಾರದು: ಯುವ ಜನತೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಕರೆ

» ದಾವಣಗೆರೆ





ದೇಶ ನನಗೇನು ಕೊಡ್ತು ಅಲ್ಲ, ನಾನು ದೇಶಕ್ಕಾಗಿ ನನ್ನ ಕರ್ತವ್ಯವೇನು ಎಂದು ಯುವಕರು ಅರಿತುಕೊಳ್ಳಬೇಕು. ಅನೇಕ ಶಕ್ತಿಗಳು ಧರ್ಮ ಹಾಗೂ ಜಾತಿ ಹೆಸರಿನಲ್ಲಿ ಶಾಂತಿಗೆ ಭಂಗ ತರುವ ಕೆಲಸ ಮಾಡುತ್ತಿವೆ. ಯಾವ ಧರ್ಮಕ್ಕೂ ವಿಶೇಷ ಸ್ಥಾನಮಾನ ಇಲ್ಲ, ಎಲ್ಲರಿಗೂ ಸಂವಿಧಾನ ಒಂದೇ, ಆದ್ದರಿಂದ ಸಂವಿಧಾನ ರಕ್ಷಿಸುವ ಕೆಲಸ ಯುವಕರು ಮಾಡಬೇಕಾಗಿದೆ ಎಂದು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರು ಯುವಜನತೆಗೆ ಕರೆ ನೀಡಿದರು.

ಭಾನುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಹಯೋಗದಲ್ಲಿ ಬಾಪೂಜಿ ಎಂಬಿಎ ಮೈದಾನದಲ್ಲಿ ಆಯೋಜಿಸಲಾದ ರಾಜ್ಯ ಮಟ್ಟದ ಯುವ ಜನೋತ್ಸವವನ್ನು ನಗಾರಿ ಬಾರಿಸಿ ಹಾಗೂ ಹೊಂಬಾಳೆ ಬಿಡಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಬಾಬಾ ಸಾಹೇಬ್ ಅಂಬೇಡ್ಕರ್ ಕೊಟ್ಟ ಸಂವಿಧಾನದಿಂದ ಇಂದು ಎಲ್ಲರೂ ಶಿಕ್ಷಣ ಪಡೆದು ಉದ್ಯೋಗ ಗಳಿಸಿ, ಗೌರವ ಮತ್ತು ಸಮಾನತೆಯಿಂದ ಬಾಳಲು ಸಾಧ್ಯವಾಗಿದೆ. ಸಂವಿಧಾನ ಇದ್ದುದರಿಂದಲೇ ನಾನು ಮುಖ್ಯಮಂತ್ರಿ ಆಗಲು ಸಾಧ್ಯವಾಯಿತು. ಸಂವಿಧಾನ ರಕ್ಷಿಸಿ, ಉಳಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಪ್ರಜಾಪ್ರಭುತ್ವ ಒಪ್ಪಿ ದೇಶದಲ್ಲಿ ಆಡಳಿತ ನಡೆಸಲಾಗುತ್ತಿದೆ. ಪ್ರಜಾಪ್ರಭುತ್ವ ಯಶಸ್ವಿಯಾಗಬೇಕಾದರೆ, ಎಲ್ಲಾ ವ್ಯಕ್ತಿಗಳಿಗೆ ಆರ್ಥಿಕ, ರಾಜಕೀಯ ಹಾಗೂ ಸಾಮಾಜಿಕ ಸಮಾನತೆ ದೊರಕಬೇಕು ಎಂಬುವುದು ಡಾ.ಅಂಬೇಡ್ಕರ್ ಆಶಯವಾಗಿತ್ತು. ಸಂವಿಧಾನ ಈ ಸಾರ ಪ್ರತಿಯೊಬ್ಬರಿಗೂ ಅರ್ಥವಾಗಬೇಕು. ಇದರ ಹಿನ್ನಲೆಯಲ್ಲಿ ಸರ್ಕಾರ ಪ್ರತಿ ಶಾಲೆಯಲ್ಲಿ ಸಂವಿಧಾನ ಓದು ಕಾರ್ಯಕ್ರಮ ಜಾರಿ ಮಾಡಿದೆ. ಮಕ್ಕಳಿಗೆ ಸಂವಿಧಾನದ ಪೀಠಿಕೆ ಬಗ್ಗೆ ಪರಿಚಯ ಮಾಡಿಕೊಡಲಾಗುತ್ತಿದೆ. ಅಂಬೇಡ್ಕರ್ ಅವರ ಆರ್ಥಿಕ ಸಮಾನತೆಯ ಆಶಯವನ್ನು ಈಡೇರಿಸುವ ದೃಷ್ಟಿಯಿಂದ ಸರ್ಕಾರ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ಹೇಳಿದರು.

ದೇಶದಲ್ಲಿ ಶೇ.35 ರಷ್ಟು ಯುವ ಜನರಿದ್ದಾರೆ, ಯುವಜನರೇ ನಮ್ಮ ದೇಶದ ಆಸ್ತಿ. ಪ್ರತಿಯೊಬ್ಬ ಯುವಕ, ಯುವತಿ ಸಮಾಜಮುಖಿ ಮನೋಭಾವ ಬೆಳಸಿಕೊಳ್ಳಬೇಕು. ವಿವಿಧ ಭಾಷೆ, ಧರ್ಮ, ಸಂಸ್ಕೃತಿ ಇವರುವುದರಿಂದ ವೀದ್ಯಾರ್ಥಿಗಳಿಗೆ ವೈಚಾರಿಕ ಹಾಗೂ ವೈಜ್ಞಾನಿಕ ಶಿಕ್ಷಣ ಅತ್ಯಗತ್ಯವಾಗಿದೆ. ಯುವಜನರು ದೇಶವನ್ನು ಮುಂದೆ ಕೊಂಡೊಯ್ಯಲು ಹಾಗೂ ಬದಲಾವಣೆ ತರುವ ಪ್ರಯತ್ನ ಮಾಡಬೇಕು. ಭವಿಷ್ಯ ನಿರ್ಮಾಣ ಮಾಡುವವರು ಯುವಜನರು, ಇದನ್ನು ಮನಗಂಡಿದ್ದ ಸ್ವಾಮಿ ವಿವೇಕಾನಂದರು 'ಏಳಿ ಎದ್ದೇಳಿ ಗುರಿ ಮುಟ್ಟುವ ತನಕ ನಿಲ್ಲದಿರಿ' ಎಂದು ಯುವ ಜನರಿಗೆ ಕರೆ ನೀಡಿದರು. ಯುವಕರಿಗೆ ಜೀವನದಲ್ಲಿ ಗುರಿ ಇರಬೇಕು. ಇದನ್ನು ಸಾಧಿಸಲು ಪರಿಶ್ರಮ ಪಡಬೇಕು. ಆಗ ಮಾತ್ರ ಗುರಿ ಸಾಧನೆ ಮಾಡಬಹುದು. ಯುವ ಜನತೆ ದೇಶಕ್ಕೆ ಸಂಪತ್ತಾಗಬೇಕು, ಹೊರೆಯಾಗಬಾರದು. ರಾಜ್ಯದಲ್ಲಿ 1.62 ಲಕ್ಷ ಯುವಕ ಯುವತಿಯರಿಗೆ ಯುವನಿಧಿ ಯೋಜನೆಯಡಿ ರೂ.216 ಕೋಟಿ ನಿರುದ್ಯೋಗ ಭತ್ಯೆಯನ್ನು ನೇರವಾಗಿ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗಿದೆ. ಇದರೊಂದಿಗೆ ಯುವ ಜನರಿಗೆ ಕೌಶಲ್ಯ ತರಬೇತಿ ನೀಡಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ತಿಳಿಸಿದರು.

ಇದೇ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಂವಿಧಾನ ಬಗ್ಗೆ ಪರಿಚಯಿಸುವ ಏಜಅ (ಏಟಿಠಿ ಥಿಂಣಡಿ ಛಿಂಟಿಣuಣಣuಣಟ) ಚಾಲನೆ ನೀಡಿದರು. ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಹಾಗೂ ರಾಜ್ಯ ಎನ್.ಎನ್.ಎಸ್ ಘಟಕದ ಕ್ಯಾಲೆಂಡರ್‌ನ್ನು ಬಿಡುಗಡೆ ಮಾಡಿದರು.



ಸುಳ್ಳು ಸುದ್ದಿ ಹಾಗೂ ಸಮೂಹ ಸನ್ನಿಯಿಂದ ದೂರವಿರಿ;

ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಪ್ರಾಸ್ತಾವಿಕವಾಗಿ ಮಾತನಾಡಿ, ದೇಶದ ಜನಸಂಖ್ಯೆಯಲ್ಲಿ ಶೇ.35 ರಷ್ಟು ಯುವಜನರಿದ್ದಾರೆ. ಕೆಲ ದುಷ್ಟ ಶಕ್ತಿಗಳು ಸಾಮಾಜಿಕ ಜಾಲತಾಣ ಮೂಲಕ ದೇಶದ ಯುವ ಜನತೆಯನ್ನು ದಾರಿ ತಪ್ಪಿಸುತ್ತಿದ್ದಾರೆ. ಯುವ ಜನತೆ ಸಾಮಾಜಿಕ ಜಾಲತಾಣಗಳಲ್ಲಿ ಬರುವ ಸುದ್ದಿಗಳನ್ನು ಒರೆಗೆ ಹಚ್ಚಿ, ಸತ್ಯಾಸತ್ಯೆಯನ್ನು ತಿಳಿದುಕೊಳ್ಳಬೇಕು. ದ್ವೇಷವನ್ನು ಬಿತ್ತುವ ವಿಚಾರ ಹಾಗೂ ಸಮೂಹ ಸನ್ನಿಯಿಂದ ದೂರವಿರಬೇಕು. ದೇಶದ ಬಹುತ್ವ ಅರ್ಥೈಸಿಕೊಳ್ಳಬೇಕು ಎಂದು ಯುವಕರಿಗೆ ಸಲಹೆ ನೀಡಿದರು.

ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಚಿವನಾಗಿದ್ದಾಗ ದಾವಣಗೆರೆಯಲ್ಲಿ ಪ್ರಥಮವಾಗಿ ಯುವಜನೋತ್ಸವ ಕಾರ್ಯಕ್ರಮ ಆಯೋಜಿಸಲಾಗಿತ್ತು. 2 ದಶಕಗಳ ತರುವಾಯ ಮತ್ತೊಮ್ಮೆ ರಾಜ್ಯಮಟ್ಟದ ಯುವಜನೋತ್ಸವ ಆಯೋಜಿಸಿರುವುದು ಸಂತಸ ತಂದಿದೆ. ಕ್ರೀಡಾ ಸಚಿವನಾಗಿದ್ದಾಗ ದಾವಣಗೆರೆಯಲ್ಲಿ ಅಂತರಾಷ್ಟ್ರೀಯ ಮಟ್ಟದ ಈಜುಕೊಳ, ಟೆನ್ನಿಸ್, ಬಾಸ್ಕೆಟ್‌ಬಾಲ್ ಕ್ರೀಡಾಂಗಣಗಳನ್ನು ನಿರ್ಮಿಸಿದ್ದೆ. ಸದ್ಯ ರಾಜ್ಯ ಸರ್ಕಾರದಿಂದ ಸಂಸದ ನೆರವಿನಿಂದ ಕ್ರೀಡಾ ಸಂಕೀರ್ಣ ನಿರ್ಮಿಸಲಾಗುತ್ತಿದೆ. ಜೆ.ಹೆಚ್.ಪಾಟೀಲ್ ನಗರದಲ್ಲಿ ಕ್ರಿಕೇಟ್ ಕ್ರೀಡಾಂಗಣ ನಿರ್ಮಾಣ ಕಾಮಗಾರಿ ಅಂತಿಮ ಹಂತದಲ್ಲಿವೆ. ದಾವಣಗೆರೆ ಜಿಲ್ಲೆಯಲ್ಲಿ ಯುವನಿಧಿ ಯೋಜನೆಯಡಿ 5802 ಯುವಜನರಿಗೆ ರೂ.8.5 ಕೋಟಿ ನಿರುದ್ಯೋಗ ಭತ್ಯೆ ನೀಡಲಾಗಿದೆ. ದಾವಣಗೆರೆ ನಗರದಲ್ಲಿ ವಿಶ್ವ ಕನ್ನಡ ಸಮ್ಮೇಳನ ಆಯೋಜಿಸುವಂತೆ ಕಸಾಪ ಸದಸ್ಯರು ಮನವಿ ಮಾಡಿದ್ದಾರೆ. ಮುಖ್ಯಮಂತ್ರಿಗಳು ಈ ಬಗ್ಗೆ ಗಮನ ಹರಿಸುವುದಾಗಿ ಭರವಸೆ ನೀಡಿದ್ದಾರೆ ಎಂದು ತಿಳಿಸಿದರು.

ಸಂಸದೆ ಪ್ರಭಾ ಮಲ್ಲಿಕಾರ್ಜುನ ಮಾತನಾಡಿ, ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಅಭಿವೃದ್ಧಿ ಯೋಜನೆಗಳು ಜನತೆಯ ಮನಮುಟ್ಟಿವೆ. ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯುವನಿಧಿ ಯೋಜನೆಯನ್ನು ಯುವ ಜನತೆಗೆ ನೀಡಿ, ಯುವ ಜನಾಂಗಕ್ಕೆ ಸರ್ಕಾರ ಪ್ರಾಮುಖ್ಯತೆ ನೀಡಿದೆ.ಯುವಕರ ದೇಶದ ಆಸ್ತಿ. ಅವರ ಪ್ರತಿಭೆ ಗುರುತಿಸಿ ಅದಕ್ಕೆ ಪೂರಕವಾದ ವಾತಾವರಣ ಸೃಷ್ಟಿಸುವ ಕಾರ್ಯ ನಾವೆಲ್ಲರೂ ಮಾಡಬೇಕಿದೆ. ಜಿಲ್ಲೆಯ ಎಲ್ಲ ಶಾಲಾ–ಕಾಲೇಜುಗಳಲ್ಲಿ ನಮ್ಮ ಸಂವಿಧಾನದ ಕುರಿತು ಅರಿವು ಮೂಡಿಸುವ ನಿಟ್ಟಿನಲ್ಲಿ ಜಿಲ್ಲಾಧಿಕಾರಿ ಹಾಗೂ ಶಿಕ್ಷಣ ಅಧಿಕಾರಿಗಳೊಂದಿಗೆ ಚರ್ಚಿಸಿ, ಕ್ರಿಯಾಯೋಜನೆ ರೂಪಿಸಿ, ಸಂವಿಧಾನದ ಬಗ್ಗೆ ಜಾಗೃತಿ ಮೂಡಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಸಚಿವ ಭೈರತಿ ಸುರೇಶ್, ಶಾಸಕರುಗಳಾದ ಕೆ.ಎಸ್.ಬಸವಂತಪ್ಪ, ಬಸವರಾಜು ವಿ ಶಿವಗಂಗಾ, ಬಿ.ದೇವೇಂದ್ರಪ್ಪ, ಬಿ.ಪಿ.ಹರೀಶ್, ಶಾಂತನಗೌಡ.ಡಿ.ಜಿ. ವಿಧಾನ ಪರಿಷತ್ ಸದಸ್ಯರಾದ ಕೆ.ಅಬ್ದುಲ್ ಜಬ್ಬಾರ್, ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಅಸಗೋಡು ಜಯಸಿಂಹ, ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಹೆಚ್.ಎಂ.ರೇವಣ್ಣ, ದಾವಣಗೆರೆ ಮಹಾನಗರ ಪಾಲಿಕೆ ಮಹಾಪೌರರಾದ ಚಮನ್ ಸಾಬ್.ಕೆ, ರಾಜ್ಯ ತಾಂಡ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಯದೇವ್ ನಾಯ್ಕ್, ದಾವಣಗೆರೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ಶಮ್ಲಾ ಇಕ್ಬಾಲ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಕಾರ್ಯದರ್ಶಿ ರಂದೀಪ್.ಡಿ, ಪೊಲೀಸ್ ಉಪ ಮಹಾನಿರೀಕ್ಷಕ ರಮೇಶ್.ಬಿ, ಜಿಲ್ಲಾ ಪಂಚಾಯಿತಿ ಸಿಇಓ ಸುರೇಶ್ ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಮಾಜಿ ಸಚಿವ ಹೆಚ್. ಆಂಜನೇಯ ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

### ಬುಡಕಟ್ಟು ಸಮುದಾಯಗಳ ಸರ್ವತೋಮುಖ ಅಭಿವೃದ್ಧಿಗೆ ಸರ್ಕಾರದ ಚಿಂತನೆ ಅಗತ್ಯ: ಡಾ.ಬಂಜಿಗೆರೆ ಜಯಪ್ರಕಾಶ್

# ಆಧುನಿಕತೆ, ತಾಂತ್ರಿಕತೆ ಹೆಸರಿನಲ್ಲಿ ಬುಡಕಟ್ಟು ಸಂಸ್ಕೃತಿಗೆ ಧಕ್ಕೆ

» ಚಳ್ಳಕೆರೆ



ಇತ್ತೀಚಿನ ವರ್ಷಗಳಲ್ಲಿ ರಾಜ್ಯವೂ ಸೇರಿದಂತೆ ದೇಶದೆಲ್ಲೆಡೆ ನೂತನ ತಾಂತ್ರಿಕತೆ ಮತ್ತು ನೈಪುಣ್ಯತೆಗೆ ಜನರು ಮಾರುಹೋಗುತ್ತಿದ್ದಾರೆ. ಪ್ರತಿಯೊಂದು ಹಂತದಲ್ಲೂ ಹೊಸತನವನ್ನು ಕಾಣುವ ತವಕ ಯುವಪೀಳಿಗೆಯಲ್ಲಿ ಹೆಚ್ಚುತ್ತಿದೆ. ಇದರಿಂದ ನಮ್ಮಲ್ಲೇ ಹುಟ್ಟಿಬೆಳೆದ ಮೂಲಸಂಸ್ಕೃತಿಯ ಬೆಳವಣಿಗೆಗೆ ಧಕ್ಕೆಯಾಗುತ್ತಿದೆ ಎಂದು ಸಂಸ್ಕೃತಿಕ ಚಿಂತಕ, ಖ್ಯಾತ ಸಾಹಿತಿ, ಬರಹಗಾರ, ರಾಜ್ಯ ಪುಸ್ತಕ ಪ್ರಾಧಿಕಾರದ ಮಾಜಿ ಅಧ್ಯಕ್ಷ ಡಾ.ಬಂಜಿಗೆರೆಜಯಪ್ರಕಾಶ್ ತಿಳಿಸಿದರು.

ಅವರು, ಶನಿವಾರ ನಗರದ ಬಾಪೂಜಿಪ್ರಥಮ ದರ್ಜೆ ಕಾಲೇಜು ಸಭಾಂಗಣದಲ್ಲಿ ಬುಡಕಟ್ಟು ಸಂಸ್ಕೃತಿ ಅಧ್ಯಯ ಹಾಗೂ ಅಭಿವೃದ್ಧಿ ಸಂಸ್ಥೆ ಆಯೋಜಿಸಿದ್ದ ರಾಜ್ಯಮಟ್ಟದ ಬುಡಕಟ್ಟು ಸಮುದಾಯದ ಅಸ್ಮಿತೆ ವಿಚಾರ ಸಂಕಿರಣವನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಚಾಲನೆ ನೀಡಿ ಮಾತನಾಡಿದರು.

ಪ್ರಾರಂಭದ ಹಂತದಲ್ಲೇ ಆಧುನಿಕತೆ ಹೆಸರಿನಲ್ಲಿ ನಮ್ಮ ಮೂಲಸಂಸ್ಕೃತಿಯನ್ನು ಮರೆಮಾಚುವ ಕೆಲಸ ನಮ್ಮಿಂದಲೇ ಆಗುತ್ತಿದೆ. ಈಗಾಗಲೇ ಭಾರಿಪ್ರಮಾಣದಲ್ಲಿ ನಮ್ಮ ಸಂಸ್ಕೃತಿಯ ಬೆಳವಣಿಗೆಗೆ ಅಡ್ಡಿಯಾಗಿದೆ. ಸಂಸ್ಕಾರವಂತರಾದರೂ ನಾವು ನಮ್ಮ ಸಂಸ್ಕೃತಿ ಉಳಿಸಿಕೊಳ್ಳುವತ್ತ ಯಾವುದೇ ಪ್ರಯತ್ನ ಮಾಡುತ್ತಿಲ್ಲ. ಆಧುನಿಕತೆಗೆ ಕೊಡುಗೆ ಗೌರವವನ್ನು ನಮ್ಮ ಮೂಲಸಂಸ್ಕೃತಿಗೆ ಕೊಡಲು ನಾವು ವಿಫಲರಾಗುತ್ತಿದ್ದೇವೆ. ಇಂದಿಗೂ ಸಹ ಗ್ರಾಮೀಣ ಪ್ರದೇಶದಲ್ಲಿನ ಹಳೇತಲೆಮಾರಿನ ಜನರನ್ನು ವಿಚಾರಿಸಿದರೆ ನಮ್ಮ ಸಂಸ್ಕೃತಿಯ ಅಡಗಿರುವ ವಿಚಾರಧಾರೆಯನ್ನು ಅರ್ಥೈಸಿಕೊಳ್ಳಬಹುದಾಗಿದೆ. ವಿಪರ್ಯಾಸವೆಂದರೆ ಸರ್ಕಾರಗಳು ಕೂಡ ಸಂಸ್ಕೃತಿಯನ್ನು ಉಳಿಸುವತ್ತ ಹೆಚ್ಚು ಗಮನಹರಿಸುತ್ತಿಲ್ಲ, ರಾಜ್ಯ ಸರ್ಕಾರ ಅಧೀನದಲ್ಲಿ ಕಾರ್ಯನಿರ್ವಹಿಸುವ ಕನ್ನಡಸಂಸ್ಕೃತಿ ಇಲಾಖೆಯೂ ಸಹ ಇಂತಹ ವಿಚಾರಗಳ ಬಗ್ಗೆ ಗಂಭೀರಚಿಂತನೆ ನಡೆಸಬೇಕು. ಸರ್ಕಾರ ಮುಂದಿನ ದಿನಗಳಲ್ಲಾದರೂ ನಮ್ಮ ಮೂಲಸಂಸ್ಕೃತಿಯ ಉಳಿಸುವ ನಿಟ್ಟಿನಲ್ಲಿ ಚಿಂತನೆ ನಡೆಸಬೇಕು. ಅವಶ್ಯವಿದ್ದಲ್ಲಿ ಬುಡಕಟ್ಟು ಸಂಸ್ಕೃತಿ ಅಧ್ಯಯ ಹಾಗೂ ಅಭಿವೃದ್ಧಿ ಸಂಸ್ಥೆ ಹಾಗೂ ನಾಡಿನ ಹಿರಿಯರನ್ನು ಸೇರಿಸಿ ಚರ್ಚಿಸಬೇಕು ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ, ರಾಜ್ಯಸಣ್ಣಕೈಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ ಮಾತನಾಡಿ, ನಾಡಿನ ಬುಡಕಟ್ಟು ಸಮುದಾಯಗಳು ನಮಗೆ ತಾಯಿಬೇರು ಇದ್ದಂತೆ, ಪ್ರಸ್ತುತ ಇಂದಿನ ಎಲ್ಲಾ ಬೆಳವಣಿಗೆಯನ್ನು ಅವಲೋಕಿಸಿದರೆ ನಮಗೆ ನಮ್ಮ ಬುಡಕಟ್ಟು ಸಂಸ್ಕತಿಯ ಅರಿವಾಗುತ್ತದೆ. ಬುಡಕಟ್ಟು ಸಂಸ್ಕೃತಿಯಿಂದಲೇ ನಾವು ಇಂದು ಬದುಕನ್ನು ರೂಪಿಸಿಕೊಂಡಿದ್ದೇವೆ. ಆಧುನಿಕತೆ, ತಾಂತ್ರಿಕತೆ ಪೈಪೋಟಿಯಲ್ಲಿ ಬುಡಕಟ್ಟು ಸಂಸ್ಕೃತಿಯನ್ನು ಮರೆತಂತೆ ಬಾಸವಾಗುತ್ತಿದೆ ಇದು ನಿಜವೂ ಹೌದು. ಕಾರ್ಯಕ್ರಮದ ಉದ್ಘಾಟಕರಾದ ಡಾ.ಬಂಜಿಗೆರೆಜಯಪ್ರಕಾಶ್‌ರವರ ಅಂಶಗಳ ಬಗ್ಗೆ ಸರ್ಕಾರದ ಗಮನಸೆಳೆಯುವುದಾಗಿ ಭರವಸೆ ನೀಡಿದರು. ರಂಗಭೂಮಿ ಕಲಾವಿದ ಹಾಗೂ ರಾಜ್ಯೋತ್ಸವ ಪ್ರಶಸ್ತಿ ವಿಜೇತ ಪಿ.ತಿಪ್ಪೇಸ್ವಾಮಿ, ಬುಡಕಟ್ಟು ಸಮುದಾಯದಗಳ ಅಸ್ಥಿತ್ವ ಹಾಗೂ ಸವಾಲುಗಳ ಬಗ್ಗೆ ಮಾತನಾಡಿ, ಇಂದಿಗೂ ಸಹ ತಾಲ್ಲೂಕಿನ ನನ್ನಿವಾಳ ಗ್ರಾಮದಲ್ಲಿ ಬುಡಕಟ್ಟು ಸಮುದಾಯಕ್ಕೆ ಸೇರಿದ ಕಟ್ಟೆಮನೆ ಹಾಗೂ ಆ ಭಾಗದ ಕಿಲಾರಿಗಳ ಕಾರ್ಯಚಟುವಟಿಕೆಗಳ ಬಗ್ಗೆ ವಿವರಣೆ ನೀಡಿದರು. ಬುಡಕಟ್ಟು ಸಮುದಾಯದಿಂದ ಇಂದಿಗೂ ನಮ್ಮ ನಾವು ನಮ್ಮ ಅಸ್ಥಿತ್ವವನ್ನು ಗುರುತಿಸಿಕೊಳ್ಳಬಹುದಾಗಿದೆ. ಬುಡಕಟ್ಟು ಸಮುದಾಯದ ಕೊಡಗೆ ಸಮಾಜಕ್ಕೆ ಅಪಾರವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಮ, ಸದಸ್ಯರಾದ ರಮೇಶ್‌ಗೌಡ, ವೀರಭದ್ರಪ್ಪ, ಎಂ.ಜೆ. ರಾಘವೇಂದ್ರ, ಬಾಪೂಜಿ ವಿದ್ಯಾಸಂಸ್ಥೆ ಆಡಳಿತಾಧಿಕಾರಿ ಜಿ.ಬಾಲರೆಡ್ಡಿ, ಸಂಚಾಲಕ ಕೆ.ಚಿತ್ತಯ್ಯ, ಪ್ರಾಧ್ಯಾಪಕರಾದ ಡಿ.ಕರಿಯಣ್ಣ, ವಿ.ಚಂದ್ರಶೇಖರ್, ಜಿ.ಡಿ.ಚಿತ್ತಣ್ಣ, ಆರ್.ಎಸ್.ಉಮೇಶ್, ಡಾ.ಜೆ.ತಿಪ್ಪೇಸ್ವಾಮಿ, ಡಾ.ಜಿ.ವಿ.ರಾಜಣ್ಣ, ನಂದಿನಿ, ಮುಜೀಬುಲ್ಲಾ, ಕೆಡಿಪಿ ನಾಮಿನಿಸದಸ್ಯ ಸುರೇಶ್, ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ಶಶಿಧರ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಚಿತ್ರದುರ್ಗ ತಾಲ್ಲೂಕು ಕಚೇರಿ: ಅಭಿಲೇಖಾಲಯ ಡಿಜಿಟಲೀಕರಣ ವ್ಯವಸ್ಥೆಗೆ ಚಾಲನೆ



» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು ಕಚೇರಿಯ ಅಭಿಲೇಖಾಲಯ ಡಿಜಿಟಲೀಕರಣ ವ್ಯವಸ್ಥೆಗೆ ಶನಿವಾರ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಚಾಲನೆ ನೀಡಿದರು. ಚಿತ್ರದುರ್ಗ ತಾಲ್ಲೂಕು ಕಚೇರಿಯ ಅಭಿಲೇಖಾಲಯ ಶಾಖೆಯ ಭೂ ದಾಖಲೆಗಳನ್ನು ಡಿಜಿಟಲೀಕರಣಗೊಳಿಸಲು ಚಾಲನೆ ನೀಡಿದ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರು,. ನಂತರ ಅಭಿಲೇಖಾಲಯ ಶಾಖೆಯನ್ನು ಪರಿಶೀಲನೆ ನಡೆಸಿದರು. "ಇನ್ನೂ ಮುಂದೆ ದಾಖಲೆ ಸುಭದ್ರ, ಶಾಶ್ವತ ನಿಮ್ಮ ಕೈಯಲ್ಲೇ, ನೇರ ಸುಲಭ ಲಭ್ಯತೆ, ತಿದ್ದಲು ಕಳೆಯಲು ಅಸಾಧ್ಯ. ತಂತ್ರಜ್ಞಾನದಿಂದ ತ್ವರಿತ ಸರಳ ಆಡಳಿತ ಮಾಡುವುದಾಗಿ ತಿಳಿಸಿದರು. ಈ ಸಂದರ್ಭದಲ್ಲಿ ತಹಶೀಲ್ದಾರ್ ಡಾ.ನಾಗವೇಣಿ, ಗ್ರೇಡ್-2 ತಹಶೀಲ್ದಾರ್ ನಾಗರಾಜ್ ಸೇರಿದಂತೆ ತಾಲ್ಲೂಕು ಕಚೇರಿಯ ಅಧಿಕಾರಿ ಹಾಗೂ ಸಿಬ್ಬಂದಿ ಇದ್ದರು.

### ಮೈಸೂರು ಕಿಸಾನ್ ಮಾಲ್ ಸ್ಥಾಪನೆ: ಅರ್ಜಿ

» ಚಿತ್ರದುರ್ಗ

ರಾಜ್ಯ ಸರ್ಕಾರ ಬಜೆಟ್‌ನಲ್ಲಿ ಪ್ರಸ್ತಾಪಿಸಿದಂತೆ, 2024-25ನೇ ಸಾಲಿನ ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯ ತೋಟಗಾರಿಕೆ ಇಲಾಖೆ ಆವರಣದಲ್ಲಿ "ಮೈಸೂರು ಕಿಸಾನ್ ಮಾಲ್" ಸ್ಥಾಪಿಸಲು ಅರ್ಹ ರೈತ ಉತ್ಪಾದಕರ ಸಂಸ್ಥೆಯಿಂದ ಆಸಕ್ತಿ ಅಭಿವ್ಯಕ್ತಪಡಿಸುವಿಕೆಯನ್ನು ಆಹ್ವಾನಿಸಲಾಗಿದ್ದು, ಜನವರಿ 13 ಅರ್ಜಿ ಸಲ್ಲಿಕೆಗೆ ಕೊನೆಯ ದಿನ. ಕರ್ನಾಟಕ ಪಬ್ಲಿಕ್ ಪ್ರೊಕ್ಯುರ್‌ಮೆಂಟ್ ಪೋರ್ಟ್‌ಲ್‌ನಲ್ಲಿ ಆಸಕ್ತ ರೈತರ ಉತ್ಪಾದಕ ಸಂಸ್ಥೆಯವರು ಇದೇ ಜ.13 ರೊಳಗಾಗಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9449103240 ಗೆ ಸಂಪರ್ಕಿಸಬಹುದು.

### ಕರ್ತವ್ಯ ನಿರ್ವಹಣೆಯಲಿ ವಿಫಲ: ಸೇವೆಯಿಂದ ವಜಾ

» ಚಿತ್ರದುರ್ಗ

ಚಳ್ಳಕೆರೆ ತಾಲ್ಲೂಕು ಎನ್. ಮಹದೇವಪುರ ಗ್ರಾಮ ಪಂಚಾಯತಿಯಲ್ಲಿ ಗ್ರಾಮ ಕಾಯಕ ಮಿತ್ರರಾಗಿ ಕೆಲಸ ನಿರ್ವಹಿಸುತ್ತಿದ್ದ ಜಿ.ಟಿ. ಭವ್ಯ ಅವರು ಸಮರ್ಪಕ ಕರ್ತವ್ಯ ನಿರ್ವಹಿಸದ ಕಾರಣಕ್ಕಾಗಿ ಅವರನ್ನು ವಜಾಗೊಳಿಸಲಾಗಿದೆ ಎಂದು ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ. ಸೋಮಶೇಖರ್ ತಿಳಿಸಿದ್ದಾರೆ. ಗ್ರಾಮ ಕಾಯಕ ಮಿತ್ರರಾಗಿ ಕಾರ್ಯ ನಿರ್ವಹಿಸುತ್ತಿದ್ದ ಜಿ.ಟಿ. ಭವ್ಯ ಅವರು ಸಮರ್ಪಕವಾಗಿ ಕಾರ್ಯ ನಿರ್ವಹಿಸುತ್ತಿರುವುದಿಲ್ಲ, ನರೇಗಾ ಫೈಲ್‌ಗಳನ್ನು ಸರಿಯಾಗಿ ನಿರ್ವಹಿಸಿರುವುದಿಲ್ಲ ಎಂಬುದಾಗಿ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಯಲ್ಲಿ ಸದಸ್ಯರುಗಳು ಚರ್ಚಿಸಿ, ಇವರನ್ನು ಕರ್ತವ್ಯದಲ್ಲಿ ಮುಂದುವರೆಸುವುದು ಸೂಕ್ತವಲ್ಲ ಎಂಬುದಾಗಿ ತೀರ್ಮಾನಿಸಿದ್ದರು. ಹೀಗಾಗಿ ಜಿ.ಟಿ. ಭವ್ಯ ಅವರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಿ, ಬೇರೊಬ್ಬರನ್ನು ನೇಮಕ ಮಾಡಿಕೊಡಬೇಕೆಂದು ಗ್ರಾ.ಪಂ. ಪಿಡಿಓ ಅವರು ಕೋರಿದ್ದರು. ಈ ಹಿನ್ನೆಲೆಯಲ್ಲಿ ಗ್ರಾಮ ಕಾಯಕ ಮಿತ್ರರಾಗಿ ಕೆಲಸ ನಿರ್ವಹಿಸುತ್ತಿದ್ದ ಜಿ.ಟಿ. ಭವ್ಯ ಅವರನ್ನು ವಜಾಗೊಳಿಸಲಾಗಿದೆ ಎಂದು ಜಿ.ಪಂ. ಸಿಇಓ ಎಸ್.ಜೆ. ಸೋಮಶೇಖರ್ ಅವರು ಆದೇಶದಲ್ಲಿ ತಿಳಿಸಿದ್ದಾರೆ.

### ಸಾಂಸ್ಕೃತಿಕ ಹಾಗೂ ಕ್ರೀಡೆ ಚಟುವಟಿಕೆಗಳ ಉದ್ಘಾಟನೆ

» ಚಿತ್ರದುರ್ಗ

ಚಿತ್ರದುರ್ಗದ ಸರ್ಕಾರಿ ಕಲಾ ಕಾಲೇಜಿನ 2024-25ನೇ ಸಾಲಿನ ಸಾಂಸ್ಕೃತಿಕ, ಕ್ರೀಡೆ, ಎನ್.ಸಿ.ಸಿ, ಎನ್.ಎಸ್.ಎಸ್., ಯುವ ರೆಡ್‌ಕ್ರಾಸ್ ಹಾಗೂ ರೋವರ್ಸ್ ಮತ್ತು ರೇಂಜರ್ಸ್ ಚಟುವಟಿಕೆಗಳ ಉದ್ಘಾಟನೆ ಸಮಾರಂಭ ಜ.7 ರಂದು ಬೆಳಿಗ್ಗೆ 10:30ಕ್ಕೆ ಕಾಲೇಜು ಆವರಣದಲ್ಲಿ ಜರುಗಲಿದೆ. ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷ ಹಾಗೂ ಶಾಸಕ ಕೆ.ಸಿ.ವಿರೇಂದ್ರಪಪ್ಪಿ ಕಾರ್ಯಕ್ರಮ ಉದ್ಘಾಟನೆ ಮಾಡುವರು. ಕಾಲೇಜು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಹಾಗೂ ವಿಧಾನ ಪರಿಷತ್ ಸದಸ್ಯ ಕೆ.ಎಸ್.ನವೀನ್, ಶಿವಮೊಗ್ಗದ ಸಹ್ಯಾದ್ರಿ ವಿಜ್ಞಾನ ಕಾಲೇಜು ಸಹ ಪ್ರಾಧ್ಯಾಪಕ ಡಾ.ಎಸ್.ಎಮ್. ಮುತ್ತಯ್ಯ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಪ್ರಾಂಶುಪಾಲ ಪ್ರೊ.ಬಿ.ಟಿ.ತಿಪ್ಪೇರುದ್ರಸ್ವಾಮಿ ಅಧ್ಯಕ್ಷತೆ ವಹಿಸುವರು. ಐ.ಕ್ಯೂ.ಎ.ಸಿ ಸಂಚಾಲಕಿ ಡಾ.ಆರ್.ತಾರಿಣಿ ಶುಭದಾಯಿನಿ, ಸಾಂಸ್ಕೃತಿಕ ಸಮಿತಿ ಸಂಚಾಲಕ ಮತ್ತು ಎನ್.ಸಿ.ಸಿ. ಅಧಿಕಾರಿ ಪ್ರೊ.ಕೆ.ಮಂಜುನಾಥ, ದೈಹಿಕ ಶಿಕ್ಷಣ ನಿರ್ದೇಶಕ ಪ್ರೊ.ಡಿ.ಆರ್.ಪ್ರಸನ್ನಕುಮಾರ್, ಎನ್.ಎಸ್.ಎಸ್. ಘಟಕ-1 ಅಧಿಕಾರಿ ಡಾ.ವಿ.ಪ್ರಸಾದ್, ಎನ್.ಎಸ್. ಎಸ್. ಘಟಕ-2 ಅಧಿಕಾರಿ ಪ್ರೊ.ಬಿ.ಕೆ.ಬಸವರಾಜು, ರೋವರ್ಸ್ ಲೀಡರ್ ಡಾ.ಆರ್.ಗಂಗಾಧರ, ರೇಂಜರ್ಸ್ ಲೀಡರ್ ಡಾ.ಕೆ.ಲೀಲಾವತಿ, ಪತ್ರಾಂಕಿತ ವ್ಯವಸ್ಥಾಪಕ ಡಬ್ಲ್ಯೂ.ಮಾರ್ಟಿನ್ ಸ್ಯಾಮುಯಲ್ ಉಪಸ್ಥಿತರಿರುವರು.

# ಸರ್ಕಾರದಿಂದ ಪೊಲೀಸ್ ಇಲಾಖೆ ಬಲಪಡಿಸಲು ಕ್ರಮ: ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಹೇಳಿಕೆ

» ಚಿತ್ರದುರ್ಗ





ರಾಜ್ಯದಲ್ಲಿ ಜನಸಂಖ್ಯೆ ಹೆಚ್ಚಳವಾದಂತೆ ಅಪರಾಧ ಪ್ರಕರಣಗಳು ಸಹ ಹೆಚ್ಚಾಗುತ್ತಿವೆ. ರಾಜ್ಯ ಸರ್ಕಾರದಿಂದ ಪೊಲೀಸ್ ಇಲಾಖೆ ಬಲಪಡಿಸಲು ಎಲ್ಲ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಹೇಳಿದರು.

ನಗರದ ಡಿಎಆರ್ ಕವಾಯತು ಮೈದಾನದಲ್ಲಿ ಶನಿವಾರ ಪೊಲೀಸ್ ಇಲಾಖೆ ವತಿಯಿಂದ ವಿವಿಧ ಪ್ರಕರಣಗಳಲ್ಲಿ ವಶಪಡಿಸಿಕೊಂಡ ಸ್ವತ್ತನ್ನು ವಾರಸುದಾರರಿಗೆ ಹಿಂದಿರುಗಿಸುವ ಕಾರ್ಯಕ್ರಮ ಮತ್ತು ಪೊಲೀಸ್ ವಸ್ತು ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯ ವಿವಿಧ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 139 ಪ್ರಕರಣಗಳಲ್ಲಿ ಒಟ್ಟು 2.13 ಕೋಟಿ ರೂ. ಬೆಲೆ ಬಾಳುವ ಚಿನ್ನಾಭರಣ, ವಾಹನ, ನಗದು, ಮೊಬೈಲ್ ಫೋನ್‌ಗಳನ್ನು ಪೊಲೀಸರು ವಶಪಡಿಸಿಕೊಂಡಿದ್ದಾರೆ. ಹೀಗೆ ವಶಪಡಿಸಿಕೊಂಡ ವಸ್ತುಗಳನ್ನು ಸಂಬಂಧಿಸಿದ ವಾರಸುದಾರರಿಗೆ ಹಿಂದಿರುಗಿಸುತ್ತಿರುವುದು ವಿಶೇಷ ಸಂದರ್ಭವಾಗಿದೆ. ಇದಕ್ಕೆ ಶ್ರಮಿಸಿದ ಜಿಲ್ಲೆಯ ಎಲ್ಲಾ ಪೊಲೀಸ್ ಸಿಬ್ಬಂದಿ ಅಭಿನಂದನೆಗೆ ಅರ್ಹರು. ಪೊಲೀಸರು ಇನ್ನೂ ಹೆಚ್ಚಿನ ಶ್ರಮ ತೆಗೆದುಕೊಂಡು ಅಪರಾಧಗಳನ್ನು ತಡೆಯಲು ಪ್ರಯತ್ನಿಸಬೇಕು. ಅಪರಾಧಗಳನ್ನು ತಡೆಗಟ್ಟುವಲ್ಲಿ ಸಾರ್ವಜನಿಕರ ಸಹಕಾರ ಕೂಡ ಅಷ್ಟೇ ಮುಖ್ಯವಾಗಿದೆ ಎಂದು ಸಚಿವ ಡಿ.ಸುಧಾಕರ್ ತಿಳಿಸಿದರು.

ಜಿಲ್ಲಾಪೊಲೀಸ್‌ವರಿಷ್ಠಾಧಿಕಾರಿರಂಜಿತ್ ಕುಮಾರ್ ಬಂಡಾರು ಮಾತನಾಡಿ, ಪ್ರಸಕ್ತ ವರ್ಷದಲ್ಲಿ ಜಿಲ್ಲೆಯಲ್ಲಿ ಒಟ್ಟು ರೂ.5.27 ಕೋಟಿಗೂ ಅಧಿಕ ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಈ ಪೈಕಿ 2.13 ಕೋಟಿ ರೂ. ಮೌಲ್ಯದ ವಸ್ತುಗಳನ್ನು ಸಂಬಂಧಿಸಿದ ವಾರಸುದಾರರಿಗೆ ಇಂದು ಮರಳಿಸಲಾಗುತ್ತಿದೆ. ಇದರೊಂದಿಗೆ ಪೊಲೀಸ್ ಜಾಗೃತಿ ಕಾರ್ಯಕ್ರಮವನ್ನು ಸಹ ಆಯೋಜಿಸಲಾಗಿದೆ. ಜಿಲ್ಲೆಯಲ್ಲಿ ಅಪರಾಧ ಪ್ರಕರಣಗಳನ್ನು ಅವಲೋಕಿಸಿದಾಗ ಇದರಲ್ಲಿ ಸಾಕಷ್ಟು ಪ್ರಕರಣಗಳನ್ನು ತಡೆಗಟ್ಟಬಹುದಿತ್ತು. ಈ ಕುರಿತು ಮಹಿಳಾ ಪೊಲೀಸ್, ಸಂಚಾರಿ ಪೊಲೀಸ್ ಹಾಗೂ ಸೈಬರ್ ಪೊಲೀಸ್ ಠಾಣೆ ವತಿಯಿಂದ ಮಹಿಳೆಯರ ರಕ್ಷಣೆ, ಆಸ್ತಿ ವಿವಾದ, ಅಪಘಾತ, ಪೋಕ್ಸೋ, ಕಳವು ಮುಂತಾದ ಪ್ರಕರಣಗಳ ತಡೆಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ವಸ್ತು ಪ್ರದರ್ಶನ ಮಳಿಗೆಗಳನ್ನು ತೆರೆಯಲಾಗಿದೆ. ಸಶಸ್ತ್ರ ಮೀಸಲು ಪಡೆಯ ವತಿಯಿಂದ ಆಯುಧಗಳ ಪ್ರದರ್ಶನವನ್ನು ಏರ್ಪಡಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಚಿತ್ರದುರ್ಗ ಡಿವೈಎಸ್‌ಪಿ ದಿನಕರ್, ಚಳ್ಳಕೆರೆ ಡಿವೈಎಸ್‌ಪಿ ರಾಜಣ್ಣ, ಹಿರಿಯೂರು ಡಿವೈಎಸ್‌ಪಿ ಶಿವಕುಮಾರ್, ಚಿತ್ರದುರ್ಗದ ಸೈಬರ್ ಅಪರಾಧ ತಡೆ ಪೊಲೀಸ್ ಠಾಣೆ ಡಿವೈಎಸ್‌ಪಿ ಓಂಕಾರನಾಯಕ್ ಸೇರಿದಂತೆ ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳ ವೃತ್ತ ನಿರೀಕ್ಷಕರು, ಸಬ್ ಇನ್ಸ್‌ಪೆಕ್ಟರ್‌ಗಳು ಭಾಗವಹಿಸಿದ್ದರು.

**2 ಕೆ.ಜಿ. ಚಿನ್ನ ಹಾಗೂ 22 ಕೆ.ಜಿ. ಬೆಳ್ಳಿ ವಶ:** ಜಿಲ್ಲೆಯಾದ್ಯಂತ ಒಟ್ಟು 2 ಕೆ.ಜಿ, 158 ಗ್ರಾಂ ಚಿನ್ನ, 22 ಕೆ.ಜಿ., 654 ಗ್ರಾಂ ಬೆಳ್ಳಿ, 81 ದ್ವಿಚಕ್ರ ವಾಹನ, 3 ನಾಲ್ಕು ಚಕ್ರ ವಾಹನ, 3 ಲಘು ವಾಹನ, 4 ಭಾರಿ ವಾಹನ ಹಾಗೂ 430 ಮೊಬೈಲ್ ಫೋನ್‌ಗಳು ಸೇರಿದಂತೆ 210 ಪ್ರಕರಣಗಳಲ್ಲಿ ಒಟ್ಟಾರೆ 5.27 ಕೋಟಿ ರೂ. ಮೌಲ್ಯದ ಸಾಮಗ್ರಿಗಳನ್ನು ಪೊಲೀಸರು ವಿವಿಧ ಪ್ರಕರಣಗಳಲ್ಲಿ ವಶಪಡಿಸಿಕೊಂಡಿದ್ದಾರೆ. ಈ ಪೈಕಿ ಒಟ್ಟು ರೂ.2,13,81,667 ಮೌಲ್ಯದ ವಸ್ತುಗಳನ್ನು 653 ವಾರಸುದಾರಿಗೆ ಹಿಂದುರಿಗಿಸಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಕುಮಾರ್ ಬಂಡಾರು ಮಾಹಿತಿ ನೀಡಿದರು.ಇದೇ ಸಂದರ್ಭದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಅಪರಾಧ ತಡೆ ಮಾಸಾಚರಣೆ ಜಾಗೃತಿ ಪುಸ್ತಕವನ್ನು ಬಿಡುಗಡೆ ಮಾಡಿದರು. ಡಿಎಆರ್ ಡಿವೈಎಸ್ಪಿ ಗಣೇಶ್ ಅವರು ಅಪರಾಧ ತಡೆ ಪ್ರತಿಜ್ಞಾ ವಿಧಿ ಬೋಧಿಸಿದರು.

**ಗಮನಸೆಳೆದ ವಸ್ತುಪ್ರದರ್ಶನ:** ವಿವಿಧ ಪ್ರಕರಣಗಳಲ್ಲಿ ಪೊಲೀಸರು ವಶಪಡಿಸಿಕೊಂಡ ವಸ್ತುಗಳನ್ನು ವಾರಸುದಾರರಿಗೆ ಹಿಂದಿರುಗಿಸುವ ಸಮಾರಂಭದ ಜೊತೆಗೆ ಸಾರ್ವಜನಿಕರಲ್ಲಿ ಅಪರಾಧ ತಡೆ, ರಸ್ತೆ ಸುರಕ್ಷತೆ, ಮಹಿಳಾ ಮತ್ತು ಮಕ್ಕಳ ರಕ್ಷಣೆ ಮುಂತಾದ ವಿಷಯಗಳ ಕುರಿತು ಅರಿವು ಮೂಡಿಸಲು ವಿಶೇಷ ವಸ್ತುಪ್ರದರ್ಶನವನ್ನು ಇದೇ ಕವಾಯತು ಮೈದಾನದಲ್ಲಿ ಆಯೋಜಿಸಿದ್ದು, ಸಾರ್ವಜನಿಕರ ಗಮನ ಸೆಳೆಯುವಲ್ಲಿ ಯಶಸ್ವಿಯಾಯಿತು. ವಸ್ತುಪ್ರದರ್ಶನದಲ್ಲಿ ಅಪರಾಧ ತಡೆಗಟ್ಟುವ ಕುರಿತು ಮಾರ್ಗಸೂಚಿ ಮತ್ತು ಸಲಹೆಗಳು, ವಿವಿಧ ಬಗೆಯ ಪೊಲೀಸ್ ಶಸ್ತ್ರಾಸ್ತ್ರಗಳ ಪ್ರದರ್ಶನ, ಶ್ವಾನದಳದ ಮಹತ್ವ ಕುರಿತು ವಸ್ತುಪ್ರದರ್ಶನ, ಪೋಕ್ಸೋ ಪ್ರಕರಣಗಳನ್ನು ತಡೆಗಟ್ಟುವುದು, ರಸ್ತೆ ಸುರಕ್ಷತೆ ಹಾಗೂ ಸಂಚಾರ ನಿಯಮಗಳು, ರಸ್ತೆ ಅಪಘಾತಗಳ ವಿಡಿಯೋ ತುಣುಕುಗಳ ನಿರಂತರ ಪ್ರದರ್ಶನ ವ್ಯವಸ್ಥೆ, ವೈರ್‌ಲೆಸ್, ಕಂಟ್ರೋಲ್‌ರೂಂ ಮತ್ತು 112 ಸಹಾಯವಾಣಿ ಕಾರ್ಯನಿರ್ವಹಿಸುವ ಬಗೆ, ಅಪಘಾತ ಸಂದರ್ಭದಲ್ಲಿ ಗಾಯಾಳುಗಳಿಗೆ ಪ್ರಾಥಮಿಕ ಚಿಕಿತ್ಸೆ ನೀಡುವುದು, ಅಗ್ನಿ ಅವಘಡಗಳನ್ನು ತಡೆಗಟ್ಟಲು ಅಗ್ನಿಶಾಮಕ ದಳದಿಂದ ಅಣಕು ಪ್ರದರ್ಶನ ಮುಂತಾದವುಗಳ ಬಗ್ಗೆ ಮಳಿಗೆಗಳನ್ನು ತೆರೆದು, ವಸ್ತುಪ್ರದರ್ಶನ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸುವ ಕಾರ್ಯಕ್ರಮ ಆಯೋಜಿಸಲಾಗಿದೆ. ಶನಿವಾರದಂದು ನಗರದ ಹಲವು ಶಾಲಾ ಕಾಲೇಜುಗಳ ಸಾವಿರಾರು ವಿದ್ಯಾರ್ಥಿಗಳು, ಸಾರ್ವಜನಿಕರು ವಸ್ತುಪ್ರದರ್ಶನ ಮಳಿಗೆಗೆ ಭೇಟಿ ನೀಡಿ, ಮಾಹಿತಿ ಪಡೆದುಕೊಂಡರು. ವಸ್ತುಪ್ರದರ್ಶನವು ಭಾನುವಾರ ಸಂಜೆ 06 ಗಂಟೆಯವರೆಗೂ ಇರಲಿದ್ದು, ವಿದ್ಯಾರ್ಥಿಗಳು, ಸಾರ್ವಜನಿಕರು ವೀಕ್ಷಿಸಬಹುದಾಗಿದೆ.

**ಪೊಲೀಸ್ ಕಾರ್ಯ ವೈಖರಿಗೆ ಸಾರ್ವಜನಿಕರ ಶ್ಲಾಘನೆ:** "ಸೀಬಾರ ಗ್ರಾಮದಲ್ಲಿ ನನ್ನ ಟ್ರ್ಯಾಕ್ಟರ್ ಟ್ರ್ಯಾಲಿ ಕಳ್ಳತನವಾಗಿತ್ತು. ಈ ಕುರಿತು ಪೊಲೀಸರಿಗೆ ದೂರು ನೀಡಿದ್ದೆ. ಪೊಲೀಸರು ಟ್ರ್ಯಾಲಿ ಹುಡುಕಿ ಕೊಟ್ಟಿದ್ದಾರೆ. ಇದರೊಂದಿಗೆ ಜಿಲ್ಲೆಯಲ್ಲಿ ಕಳ್ಳತನವಾದ ಬಂಗಾರ, ಬೆಳ್ಳಿ, ವಾಹನ, ಮೊಬೈಲ್ ಫೋನ್‌ಗಳನ್ನು ಹುಡುಕಿ ವಾರಸುದಾರರಿಗೆ ತಲುಪಿಸಿದ್ದಾರೆ. ಪೊಲೀಸರಿಗೆ ನನ್ನ ಧನ್ಯವಾದಗಳು" ಎಂದು ನುಲೇನೂರು ಗ್ರಾಮದ ನೂಲೇಶ್ ಮಾಧ್ಯಮವರೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡರು.

"ಚಿತ್ರದುರ್ಗದಲ್ಲಿಹಿಂದುಮಹಾಗಣಪತಿ ಮೆರವಣಿಗೆ ವೇಳೆ 30 ಸಾವಿರ ಮೌಲ್ಯದ ನನ್ನ ವಿವೋ ವಿ23 ಸ್ಮಾರ್ಟ್ ಫೋನ್ ಕಳ್ಳತನವಾಗಿತ್ತು. ಈ ಬಗ್ಗೆ ದೂರು ದಾಖಲಿಸಿದ್ದೆ. ಪೊಲೀಸರು ಮೊಬೈಲ್ ಪತ್ತೆ ಹಚ್ಚಿ ಹಿಂದಿರುಗಿಸಿದ್ದಾರೆ. ಪೊಲೀಸ್ ಕಾರ್ಯ ಶ್ಲಾಘನೀಯವಾದದ್ದು" ಎಂದು ಚಿತ್ರದುರ್ಗ ನಗರದ ಕೆಳಗೋಟೆ ನಿವಾಸಿ ನಿರಂಜನ್ ಅಭಿಪ್ರಾಯ ತಿಳಿಸಿದರು.

# ಎಲ್ಲಾ ಕೆರೆಗಳಲ್ಲಿ ನೀರು ತುಂಬಬೇಕಾದರೆ ಸಿರಿಗೆರೆ ಸ್ವಾಮೀಜಿಗಳಿಂದ ಮಾತ್ರ ಸಾಧ್ಯ: ನಿಜಲಿಂಗಪ್ಪ

» ಚಿತ್ರದುರ್ಗ




ಹರಿದು ಹಂಚಿ ಹೋಗಿರುವ ಜಿಲ್ಲೆಯ ಎಲ್ಲಾ ರೈತ ಸಂಘಟನೆಗಳು ಒಂದಾಗುವ ಕುರಿತು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆಯಿಂದ ಎ.ಪಿ.ಎಂ.ಸಿ. ರೈತ ಭವನದಲ್ಲಿ ಶನಿವಾರ ಸಮಾಲೋಚನಾ ಸಭೆ ನಡೆಯಿತು.

ರೈತ ಮುಖಂಡ ಬೇಡರೆಡ್ಡಿಹಳ್ಳಿ ಬಸವರೆಡ್ಡಿ ಸಮಾಲೋಚನಾ ಸಭೆಯನ್ನುದ್ದೇಶಿಸಿ ಮಾತನಾಡುತ್ತ ಇಷ್ಟು ವರ್ಷಗಳ ಕಾಲ ರಾಜಕಾರಣಿಗಳನ್ನು ನಂಬಿ ಹಾಳಾಗಿದ್ದೇವೆ. ಇನ್ನು ಆಸೆಯಿಟ್ಟುಕೊಂಡು ಕಾಲಹರಣ ಮಾಡುವುದರಲ್ಲಿ ಅರ್ಥವಿಲ್ಲ. ಎಲ್ಲಾ ಕೆರೆಗಳಿಗೆ ನೀರು ತುಂಬಿಸುವ ಶಕ್ತಿಯಿರುವ ಸಿರಿಗೆರೆಯ ಡಾ.ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳನ್ನು ಜ.13 ರಂದು ಎಲ್ಲರೂ ಒಗ್ಗೂಡಿ ಭೇಟಿಯಾಗಿ ನಮ್ಮ ಸಮಸ್ಯೆಗಳ ಕುರಿತು ಚರ್ಚಿಸೋಣ. ಇಲ್ಲಿಯವರೆಗೂ ನಮ್ಮನ್ನಾಳಿದ ಯಾವ ಶಾಸಕ ಸಂಸದರಿಂದಲೂ ರೈತರ ಸಮಸ್ಯೆಗಳಿಗೆ ಪರಿಹಾರ ಸಿಕ್ಕಿಲ್ಲ. ಇನ್ನು ಮುಂದಾದರೂ ರೈತ ಸಂಘಟನೆಗಳೆಲ್ಲಾ ಒಂದಾಗಿ ಸಂಘಟಿತರಾಗೋಣ ಎಂದು ಕರೆ ನೀಡಿದರು.

ಮತ್ತೊಬ್ಬರೈತಮುಖಂಡಆರ್.ಬಿ.ನಿಜಲಿಂಗಪ್ಪ ಮಾತನಾಡಿ ಎಲ್ಲಾ ಕೆರೆಗಳಲ್ಲಿ ನೀರು ತುಂಬಬೇಕಾದರೆ ಸಿರಿಗೆರೆಯ ಡಾ.ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿಗಳಿಂದ ಮಾತ್ರ ಸಾಧ್ಯ. ಹಾಗಾಗಿ ಜ.13 ರಂದು ಎಲ್ಲರೂ ಒಗ್ಗೂಡಿ ಸ್ವಾಮೀಜಿಯನ್ನು ಭೇಟಿ ಮಾಡೋಣ. ಅದಕ್ಕಾಗಿ ಜಿಲ್ಲೆಯಾದ್ಯಂತ ಎಲ್ಲಾ ತಾಲ್ಲೂಕುಗಳಲ್ಲಿ ಸಂಚರಿಸಿ ರೈತರಲ್ಲಿ ಜಾಗೃತಿ ಮೂಡಿಸುವ ಅವಶ್ಯಕತೆಯಿದೆ. ಬರಗಾಲಕ್ಕೆ ತುತ್ತಾಗಿರುವ ಮಧ್ಯ ಕರ್ನಾಟಕದ ಚಿತ್ರದುರ್ಗ ಜಿಲ್ಲೆಗೆ ನೀರು ಹರಿಸಬೇಕಾಗಿದೆ. ರೈತ ನಾಯಕ ಪ್ರೊ.ನಂಜುಂಡಸ್ವಾಮಿ ಸಮಾಧಿಗೆ ಹೋಗಿ ಕರಪತ್ರವಿಟ್ಟು ಎಲ್ಲಾ ರೈತರು ಒಂದಾಗಲಿ ಎಂದು ಪ್ರಾರ್ಥಿಸಿಕೊಂಡು ಬಂದಿದ್ದೇವೆ. ರೈತರ ಪರವಾಗಿ ನೂರಾರು ಹೋರಾಟಗಳನ್ನು ಮಾಡಿ ಮೂರು ಬಾರಿ ಜೈಲಿಗೆ ಹೋಗಿ ಬಂದಿದ್ದೇನೆ. ನಮ್ಮ ಮಕ್ಕಳ ಮುಂದಿನ ಭವಿಷ್ಯಕ್ಕಾಗಿಯಾದರೂ ಎಲ್ಲಾ ಸಂಘಟನೆಗಳು ಒಂದಾಗಿ ಹೋರಾಡೋಣ ಎಂದು ಹೇಳಿದರು. ರೈತ ನಾರಪ್ಪ ಮಾತನಾಡುತ್ತ ವೈಮನಸ್ಸು ಬಿಟ್ಟು ಎಲ್ಲಾ ರೈತರು ಒಂದಾಗಿ ಸಿರಿಗೆರೆಯ ಡಾ.ಶಿವಮೂರ್ತಿ ಶಿವಾಚಾರ್ಯ ಸ್ವಾಮಿಗಳ ಬಳಿ ಹೋಗೋಣ. ಒಗ್ಗಟ್ಟಿನಿಂದ ರೈತರುಸರ್ಕಾರಗಳವಿರುದ್ದಶಕ್ತಿಪ್ರದರ್ಶಿಸಬೇಕಿದೆ. ಸಂಕುಚಿತ ಮನೋಭಾವ ಬಿಟ್ಟು ವಿಶಾಲವಾದ ಆಲೋಚನೆಯಿಟ್ಟುಕೊಂಡಾಗ ಮಾತ್ರ ರೈತ ಕುಲ ಉಳಿಯಲು ಸಾಧ್ಯ ಎಂದರು.

## ಸಮಾಜದ ಅಂಕುಡೊಂಕು ತಿದ್ದುವಲ್ಲಿ ಜನಪದ; ಕೋಳಿ ಜೂಜಾಟದ ಸಂಕಷ್ಟ ಅನಾವರಣಗೊಳಿಸಿದ ಗೀತೆ




» ದಾವಣಗೆರೆ

ಬಿ.ಐ.ಇ.ಟಿ. ಇಂಜಿನಿಯರಿಂಗ್ ಕಾಲೇಜು ಎಸ್.ಎಸ್.ಮಲ್ಲಿಕಾರ್ಜುನ ಸಾಂಸ್ಕೃತಿಕ ಕೇಂದ್ರದಲ್ಲಿ ಆಯೋಜಿಸಲಾದ ಯುವಜನೋತ್ಸವದ ಜಾನಪದ ನೃತ್ಯ ಸ್ಪರ್ಧೆಯಲ್ಲಿ ಕೋಲಾರ ಜಿಲ್ಲಾ ತಂಡ, ಕೋಳಿ ಜೂಜಾಟ ಪಂದ್ಯದ ಕುರಿತು ಜಾನಪದ ಗೀತೆಯನ್ನು ನೃತ್ಯದೊಂದಿಗೆ ಪ್ರದರ್ಶಿಸಿದರು. ಕೋಲಾರ ಜಿಲ್ಲೆ ಸೇರಿದಂತೆ ಆಂದ್ರ ಗಡಿ ಭಾಗದಲ್ಲಿ ಪ್ರಚಲಿತ ಇರುವ ಕೋಳಿ ಪಂದ್ಯ ಗ್ರಾಮೀಣ ಭಾಗದಲ್ಲಿನ ಮೋಜಿನ ಆಟವಾಗಿದೆ. ಇದರಲ್ಲಿ ಗ್ರಾಮೀಣ ಪುರುಷರು ಹಣ, ಬಂಗಾರಗಳನ್ನು ಪಣದಲ್ಲಿ ಇಟ್ಟು ಸೋತು ಆರ್ಥಿಕ ಸಂಕಷ್ಟಕ್ಕೆ ಸಿಲುಕುತ್ತಿದ್ದರು. ಇದರಿಂದ ಬಾದಿತವಾದ ಹೆಣ್ಣು ಮಗಳು ತನ್ನ ಗಂಡನಿಗೆ ಕೋಳಿ ಪಂದ್ಯ ಆಡದಂತೆ, ವಿವಿಧ ರೂಪಕಗಳಲ್ಲಿ ಎಚ್ಚರಿಸುತ್ತಾರೆ. ಪ್ರಸ್ತುತ ಸಮಾಜದಲ್ಲಿ ಆ□□ಲೈನ್ ಬೆಟ್ಟಿಂಗ್ ಭೂತಕ್ಕೆ ರಾಜ್ಯದಲ್ಲಿ ಹಲವರು ಹಣ ಸೋತು ಆತ್ಮಹತ್ಯೆ ಮಾಡಿಕೊಂಡ ಸುದ್ದಿಗಳು ಮಾಧ್ಯಮದಲ್ಲಿ ವರದಿಯಾಗಿವೆ. ಈ ಹಿನ್ನಲೆಯಲ್ಲಿ ಕೋಳಿ ಪಂದ್ಯ ಅಥವಾ ಆನ್ ಲೈನ್ ಬೆಟ್ಟಿಂಗ್ ಇರಲಿ ಇಂದಿಗೂ ಮಹಿಳೆಯರು ಜೂಜಟದ ಬವಣೆ ಎದುರುಸುತ್ತಿದ್ದಾರೆ. ಎಚ್ಚರಿಸುವಲ್ಲಿನ ಈ ಗೀತೆ ಗಮನ ಸೆಳೆಯಿತು.

## ಪ್ರಮುಖ ಸುದ್ದಿ

### ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್

# ದುಶ್ಚಟಗಳಿಂದ ದೂರವಿರುವುದೇ ಆರೋಗ್ಯಕ್ಕೆ ರಹದಾರಿ

» ಚಿತ್ರದುರ್ಗ



ಸ್ವಚ್ಛತೆ, ಪೌಷ್ಠಿಕ ಆಹಾರ ಸೇವನೆ, ದುಶ್ಚಟಗಳಿಂದ ದೂರವಿರುವುದೇ ಆರೋಗ್ಯಕ್ಕೆ ರಹದಾರಿ ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯಾಧಿಕಾರಿ ಎನ್.ಎಸ್. ಮಂಜುನಾಥ್ ಹೇಳಿದರು.

ನಗರದ ಅಗಸನಕಲ್ಲು ಟಿಪ್ಪುನಗರದ ಶ್ರೀ ದುರ್ಗಾಪರಮೇಶ್ವರಿ ದೇವಸ್ಥಾನದ ಆವರಣದಲ್ಲಿ ಆರೋಗ್ಯ ಇಲಾಖೆ, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಯೋಜನೆ ಸಹಯೋಗದೊಂದಿಗೆ ಶನಿವಾರ ಜರುಗಿದ ಸ್ವ-ಸಹಾಯ ಸಂಘಗಳ ಗುಂಪಿಗೆ ಪರಿಸರ ಸ್ವಚ್ಛತೆ, ಜೀವನ ಮೌಲ್ಯ ತಿಳಿಸುವ ಆರೋಗ್ಯ ಮಾಹಿತಿ ಶಿಕ್ಷಣ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಲುಷಿತ ನೀರು, ಗಾಳಿ, ಆಹಾರ ಸೇವನೆ ಮಾಡುವುದರಿಂದ ದೇಹದ ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರಿ ರೋಗ ರುಜಿನಿಗಳು ನಿಮ್ಮನ್ನು ಬಾಧಿಸುವುದಲ್ಲದೆ ದುಡಿಯುವ ದಿನಗಳ ಕಡಿಮೆ ಮಾಡಿ, ಕೌಟುಂಬಿಕ ಆರ್ಥಿಕ ಮುಗ್ಗಟ್ಟು ಬರುತ್ತದೆ. ಹಾಗಾಗಿ ಜೀವನ ಮೌಲ್ಯ ಅರ್ಥ ಮಾಡಿಕೊಳ್ಳಿ, ನಿಮ್ಮ ಮನೆಯ ಸುತ್ತಮುತ್ತ ಸ್ವಚ್ಛತೆ ಕಾಪಾಡಿ ಎಂದು ಸಲಹೆ ನೀಡಿದರು. ಪೌಷ್ಠಿಕ ಆಹಾರ ಸೇವನೆ, ಶುದ್ಧವಾದ ನೀರನ್ನು ಕುಡಿಯಿರಿ, ಶೌಚಾಲಯವನ್ನು ಬಳಸಿ ನಿಮ್ಮ ಆರೋಗ್ಯ ಕಾಪಾಡಿಕೊಳ್ಳಿ ಎಂದು ಹೇಳಿದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, ಬಾಲ್ಯ ವಿವಾಹ ಮಾಡಬೇಡಿ. ಬಾಲ್ಯ ವಿವಾಹ ನಿಷೇಧ ಕಾಯ್ದೆ ತುಂಬಾ ಕಠಿಣವಾಗಿದೆ. ನಿಮ್ಮ ಸುತ್ತ-ಮುತ್ತ ಇಂತಹ ಪ್ರಕರಣ ಕಂಡು ಬಂದಲ್ಲಿ 1098ಕ್ಕೆ ದೂರವಾಣಿ ಕರೆ ಮೂಲಕ ಮಾಹಿತಿ ನೀಡಿ. ಬಾಲ್ಯ ವಿವಾಹ ತಡೆಗಟ್ಟಿ, ತಾಯಿ ಮರಣ, ಶಿಶುಮರಣ ನಿಯಂತ್ರಿಸಿ. ಧೂಮಪಾನ ಮದ್ಯಪಾನ ಕೆಟ್ಟ ಚಟಗಳಿಂದ ದೂರವಿರಿ. ಪ್ಲಾಸ್ಟಿಕ್ ಬಳಕೆ ನಿಷೇಧಿಸಿ ಕ್ಯಾನ್ಸರ್‌ನಿಂದ ಮುಕ್ತರಾಗಿ ಎಂದರು.

ಇದೇ ಸಂದರ್ಭದಲ್ಲಿ ಶ್ರೀ ದುರ್ಗಾ ಪರಮೇಶ್ವರಿ ದೇವಸ್ಥಾನದ ಸುತ್ತ-ಮುತ್ತ ಸ್ವಸಹಾಯ ಸಂಘದ ಸದಸ್ಯರು ಸ್ವಚ್ಛತಾ ಕಾರ್ಯಕ್ರಮ ನೆರವೇರಿಸಿದರು.

ಕಾರ್ಯಕ್ರಮದಲ್ಲಿ ಧರ್ಮಸ್ಥಳ ಗ್ರಾಮೀಣ ಅಭಿವೃದ್ಧಿ ಯೋಜನೆ ಮೇಲ್ವಿಚಾರಕ ಶಿವಕುಮಾರ್, ಜ್ಞಾನವಿಕಾಸ ಘಟಕದ ಚಂದ್ರಕಲಾ, ಅಂಗನವಾಡಿ ಕಾರ್ಯಕರ್ತೆಯರಾದ ಅಸ್ಮಾ ಬಾನು, ಹಸೀನಾ, ಸ್ವಸಹಾಯ ಸಂಘದ 45 ಜನ ಸದಸ್ಯರ ಇದ್ದರು.

## ಫಾಸ್ಟ್ ನ್ಯೂಸ್

### ಜ.7 ರಂದು ಮಹನೀಯರ ಜಯಂತಿಗಳ ಪೂರ್ವಭಾವಿ ಸಭೆ

» **ಚಿತ್ರದುರ್ಗ**

ಜ.14 ರಂದು ಶ್ರೀ.ಶಿವಯೋಗಿ ಸಿದ್ಧರಾಮೇಶ್ವರ, ಜ.19 ಮಹಾಯೋಗಿ ವೇಮನ, ಜ.21 ರಂದು ಅಂಬಿಗರ ಚೌಡಯ ಜಯಂತಿ ಆಚರಣೆ ಕುರಿತು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ, ಜ.7 ರಂದು ನಗರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ, ಪೂರ್ವಭಾವಿ ಸಭೆಗಳನ್ನು ಆಯೋಜಿಸಲಾಗಿದೆ. ಸಿದ್ಧರಾಮೇಶ್ವರ ಜಯಂತಿ ಪೂರ್ವಭಾವಿ ಸಭೆ ಮಧ್ಯಾಹ್ನ 12 ಗಂಟೆಗೆ, ವೇಮನ ಜಯಂತಿ ಪೂರ್ವಭಾವಿ ಸಭೆ ಮಧ್ಯಾಹ್ನ 12:30ಕ್ಕೆ ಹಾಗೂ ಅಂಬಿಗರ ಚೌಡಯ್ಯ ಜಯಂತಿ ಪೂರ್ವಭಾವಿ ಸಭೆ ಮಧ್ಯಾಹ್ನ1 ಗಂಟೆಗೆ ಜರುಗಲಿದ್ದು, ಸಮುದಾಯದ ಮುಖಂಡರು, ಸಾರ್ವಜನಿಕರು, ಜಿಲ್ಲಾ ಮಟ್ಟದ ಅಧಿಕಾರಿಗಳು ತಪ್ಪದೇ ಹಾಜರಾಗಿ ಸಲಹೆ ಸೂಚನೆ ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಉಚಿತ ವೃತ್ತಿಪರ ತರಬೇತಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ಕೇಂದ್ರೀಯ ಪೆಟ್ರೋಕೆಮಿಕಲ್ಸ್ ತಂತ್ರಜ್ಞಾನ ಸಂಸ್ಥೆ (ಸಿಪೆಟ್), ಮೈಸೂರಿನಲ್ಲಿ ನಿರುದ್ಯೋಗಿ ಯುವಕ ಯುವತಿಯರಿಗೆ ವಿವಿಧ ವೃತಿಪರ ಯೋಜನೆಗಳಿಗೆ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. 8ನೇ ತರಗತಿ, 10ನೇ ತರಗತಿ, ಪಿಯುಸಿ, ಜೆಒಸಿ, ಡಿಪ್ಲೋಮಾ, ಬಿ.ಇ, ಯಾವುದೇ ಡಿಗ್ರಿ(ಫಾಸ್, ಫೇಲ್) ವಿದ್ಯಾರ್ಹತೆ ಹೊಂದಿರುವವರಿಗೆ 3 ರಿಂದ 6 ತಿಂಗಳ ಅವಧಿಯ ತರಬೇತಿ ಕಾರ್ಯಕ್ರಮವನ್ನು ಉಚಿತಊಟ,ವಸತಿಯೊಂದಿಗೆನೀಡಲಾಗುವುದು. ಅಭ್ಯರ್ಥಿಗಳಿಗೆ ತರಬೇತಿಗನುಸಾರ ಮಾಸಿಕ 500 ರಿಂದ 1000 ರೂಪಾಯಿಗಳವರೆಗೆ ಶಿಷ್ಯವೇತನ ನೀಡಲಾಗುವುದು. ತಮ್ಮ ವಿದ್ಯಾರ್ಹತೆಗೆ ಸಂಬಂಧಿಸಿದ ಅಂಕಪಟ್ಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಮೂಲ ದಾಖಲೆಗಳು ಮತ್ತು 6 ಪಾಸ್‌ಪೋರ್ಟ್ ಅಳತೆಯ ಫೋಟೋಗಳೊಂದಿಗೆ ನೇರವಾಗಿ ಬಂದು ದಾಖಲಾತಿ ಪಡೆಯುವುದರ ಮೂಲಕ ಉಚಿತ ತರಬೇತಿಯ ಸದುಪಯೋಗ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಸೆಂಟ್ರಲ್ ಇನ್ಸ್‌ಟ್ಯೂಟ್ ಆಫ್ ಪೆಟ್ರೋಕೆಮಿಕಲ್ ಇಂಜಿನಿಯರಿಂಗ್ ಅಂಡ್ ಟೆಕ್ನಾಲಜಿ, 437/ಂ, ಹೆಬ್ಬಾಳು ಕೈಗಾರಿಕಾ ಪ್ರದೇಶ, ಮೈಸೂರು –570 016. ದೂ.ಸಂ:9380756024, 7899669920, 08212510619 ಸಂಪರ್ಕಿಸಲು ವ್ಯವಸ್ಥಾಪಕರು ತಿಳಿಸಿದ್ದಾರೆ.

### ಏಜೆಂಟರುಗಳಾಗಿ ಕಾರ್ಯನಿರ್ವಹಿಸಲು ಅರ್ಜಿ ಆಹ್ವಾನ

» **ದಾವಣಗೆರೆ**

ದಾವಣಗೆರೆ ಅಂಚೆ ವಿಭಾಗದ ವ್ಯಾಪ್ತಿಯಲ್ಲಿ ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆಯ ಏಜೆಂಟರುಗಳಾಗಿ ಕಾರ್ಯನಿರ್ವಹಿಸಲು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿದಾರರು ಜನವರಿ 20 ರಂದು ಬೆಳಿಗ್ಗೆ 11 ಗಂಟೆಗೆ ತಮ್ಮ ಸಂಪೂರ್ಣ ವಿವರ ಹಾಗೂ ದಾಖಲೆಗಳೊಂದಿಗೆ ಅಂಚೆ ಅಧೀಕ್ಷಕರು ದಾವಣಗೆರೆ ಅಂಚೆ ವಿಭಾಗ ದಾವಣಗೆರೆ–01 ಇಲ್ಲಿ ನೇರ ಸಂದರ್ಶನಕ್ಕೆ ಹಾಜರ ಗಬೇಕೆಂದು ಅಂಚೆ ಅಧೀಕ್ಷಕರು ತಿಳಿಸಿದ್ದಾರೆ.

### ಎಂಸಿಎ ಸೀಟುಗಳಿಗೆ ಅರ್ಜಿ ಆಹ್ವಾನ

» **ದಾವಣಗೆರೆ**

ವಿಶ್ವವಿದ್ಯಾನಿಲಯದ ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಖಾಲಿ ಉಳಿದಿರುವ ಮಾಸ್ಟರ್ ಆಫ್ ಕಂಪ್ಯೂಟರ್ ಆಪ್ಲಿಕೇಶನ್ ಸೀಟುಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿಗಳು ಜನವರಿ 10 ರವರೆಗೆ ವಿಶ್ವವಿದ್ಯಾನಿಲಯದ ವೆಬ್‌ಸೈಟ್ www.davangereuniversity.ac.in ಮೂಲಕ ಅರ್ಜಿ ಡೌನ್‌ಲೋಡ್ ಮಾಡಿಕೊಂಡು ಆಫ್‌ಲೈನ್ ಮೂಲಕ ವಿಶ್ವವಿದ್ಯಾನಿಲಯದ ಎಂಸಿಎ ಅಧ್ಯಯನ ವಿಭಾಗಕ್ಕೆ ಸಲ್ಲಿಸಬೇಕು. ಅರ್ಜಿಗಳ ಪರಿಶೀಲನೆ ಮತ್ತು ಪ್ರವೇಶ ಪರೀಕ್ಷಾ ಶುಲ್ಕ ಜನರಲ್, ಓಬಿಸಿ ವಿದ್ಯಾರ್ಥಿಗಳಿಗೆ ರೂ.2000/–, ಎಸ್‌ಸಿ, ಎಸ್‌ಟಿ, ಸಿ–1 ವಿದ್ಯಾರ್ಥಿಗಳಿಗೆ ರೂ.1000/– ಶುಲ್ಕವನ್ನು ವಿಶ್ವವಿದ್ಯಾನಿಲಯದ ಹಣಕಾಸು ಅಧಿಕಾರಿಗಳು,ಖಾತೆ ಸಂ: 40619101261 (ಐಎಫ್‌ಎಸ್‌ಸಿ ಕೋಡ್–ಎಸ್‌ಬಿಐಎನ್0040869) ಸಂದಾಯವಾಗುವಂತೆ ಪಾವತಿಸಬೇಕು. ಅಥವಾ ಹಣಕಾಸು ಅಧಿಕಾರಿಗಳು ದಾವಣಗೆರೆ ವಿಶ್ವವಿದ್ಯಾನಿಲಯ, ಶಿವ ಗಂಗೋತ್ರಿ ಇವರ ಹೆಸರಿನಲ್ಲಿ ಡಿ.ಡಿ ಮೂಲಕ ಪಾವತಿಸಬಹುದು. ಕೋರ್ಸ್‌ನ ಪ್ರವೇಶ ಪರೀಕ್ಷೆಯನ್ನು ಸಂಬಂಧಪಟ್ಟ ವಿಭಾಗದಲ್ಲಿ ಜ.16 ರಂದು ಬೆಳಿಗ್ಗೆ 11.30 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಏರ್ಪಡಿಸಲಾಗುವುದು ಹೆಚ್ಚಿನ ವಿವರಗಳಿಗೆ ವೆಬ್‌ಸೈಟ್‌ನ್ನು ಸಂಪರ್ಕಿಸಿ.

### ಆಯ್ಯ-ವ್ಯಯ ಸಭೆ

» **ದಾವಣಗೆರೆ**

ಪ್ರಸಕ್ತ ಸಾಲಿನ ಆಯವ್ಯಯ ಅಂದಾಜು ಪಟ್ಟಿಯನ್ನು ತಯಾರಿಸಲು ಸಲಹೆ ಸೂಚನೆಗಳನ್ನು ಪಡೆಯಲು ಜನವರಿ 8 ರಂದು ಬೆಳಿಗ್ಗೆ 11 ಗಂಟೆಗೆ ಮಹಾನಗರಪಾಲಿಕೆಯ ಕೌನ್ಸಿಲ್ ಸಭಾಂಗಣದಲ್ಲಿ ಎರಡನೇ ಸಭೆಯನ್ನು ಆಯೋಜಿಸಲಾಗಿದೆ.

# ಎಲ್ಲಾ ಜಾತಿ, ಧರ್ಮಗಳ ಸಾರವನ್ನು ಹಿಡಿದಿಟ್ಟುಕೊಂಡಿದ್ದ ಸಂತ ಷರೀಫರು

» **ಚಿತ್ರದುರ್ಗ**

ಎಲ್ಲಾ ಜಾತಿ, ಧರ್ಮಗಳ ಸಾರವನ್ನು ಹಿಡಿದಿಟ್ಟುಕೊಂಡಿದ್ದ ಸಂತ ಶಿಶುನಾಳ ಷರೀಫರು ಸಹಬಾಳ್ವೆ, ಸೌಹಾರ್ದತೆ ಸಂದೇಶವನ್ನು ಸಮಾಜಕ್ಕೆ ಸಾರಿದ್ದಾರೆಂದು

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಂ.ಶಿವಸ್ವಾಮಿ ತಿಳಿಸಿದರು.

ಕರ್ನಾಟಕ ಮುಸ್ಲಿಂ ಕಲ್ಚರಲ್ ಅಕಾಡೆಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವುಗಳ ಸಹಯೋಗದೊಂದಿಗೆ ಹೊರಪೇಟೆಯಲ್ಲಿರುವ ಸರ್ಕಾರಿ ಉರ್ದು ಶಾಲೆಯಲ್ಲಿ

ಶನಿವಾರ ಹಮ್ಮಿಕೊಳ್ಳಲಾಗಿದ್ದ ಸಂತ ಶಿಶುನಾಳ ಷರೀಫರ ತತ್ವಪದಗಳ ಗಾಯನ ಮತ್ತು ಸಾಂಸ್ಕೃತಿಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಗುರುಗೋವಿಂದಭಟ್ಟರ ಶಿಷ್ಯರಾಗಿದ್ದ ಸಂತ ಶಿಶುನಾಳ ಷರೀಫರು ಹಿಂದು–ಮುಸ್ಲಿಂರು ಸಹೋದರತ್ವದಿಂದ ಬಾಳಬೇಕು. ಎಲ್ಲಿಯೂ ಜಾತಿ, ಧರ್ಮದ ತಾರತಮ್ಯವಿರಬಾರದು ಎನ್ನುವುದು ಅವರ ತತ್ವವಾಗಿತ್ತು. ಶಾಲಾ–ಕಾಲೇಜು ಮಕ್ಕಳಿಗೆ ಸಂತ ಶಿಶುನಾಳರ ತತ್ವ, ಸಿದ್ದಾಂತಗಳ ಪರಿಚಯವಾಗಬೇಕು. ಕನ್ನಡ ಭಾಷೆಗೆ ತನ್ನದೇ ಆದ ಮಹತ್ವವಿದೆ. ಕನ್ನಡ ನಾಡಿನಲ್ಲಿರುವ ಪ್ರತಿಯೊಬ್ಬರು ಕನ್ನಡ ಭಾಷೆಯನ್ನು ಕಲಿತು ದಿನನಿತ್ಯದ ಜೀವನದಲ್ಲಿ ಬಳಸುವ ಮೂಲಕ ಉಳಿಸಿ ಬೆಳೆಸಬೇಕಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಹಿರಿಯ ನ್ಯಾಯವಾದಿ ಕರ್ನಾಟಕ ಮುಸ್ಲಿಂ ಕಲ್ಚರಲ್ ಅಕಾಡೆಮಿ ಗೌರವಾಧ್ಯಕ್ಷ ಬಿ.ಕೆ. ರಹಮತ್‌ವುಲ್ಲಾ ಮಾತನಾಡಿ ಜಾತಿ ಧರ್ಮ ಅವರವರ ಮನೆಯೊಳಗಿರಬೇಕು. ಬೀದಿಗೆ ತರಬಾರದು. ಡಾ.ಬಿ.ಆರ್.ಅಂಬೇಡ್ಕರ್ ಸಂವಿಧಾನದ ಮೂಲಕ ಎಲ್ಲಾ ಜಾತಿ




ಧರ್ಮದವರಿಗೆ ಸಮಾನವಾದ ಹಕ್ಕು ನೀಡಿದ್ದಾರೆ.

ಸಂತಶಿಶುನಾಳ ಷರೀಫರು ಜಾತಿ, ಪಂಥ, ಧರ್ಮ, ಭಾಷೆಯನ್ನು ಮೀರಿದ್ದರಿಂದ ಸಂತರೆನಿಸಿಕೊಂಡರು. ಗುರುಗೋವಿಂದ ಭಟ್ಟರ ಶಿಷ್ಯನಾಗಿದ್ದ ಸಂತ ಶಿಶುನಾಳ ಷರೀಫರುಗುರುವನ್ನು ಮೀರಿ ಬೆಳೆದರು. ಗುರು–ಶಿಷ್ಯರ ಸಮಾಧಿ ಅಕ್ಕಪಕ್ಕದಲ್ಲಿದೆ ಎಂದು ನುಡಿದರು.

ಸಾಂಸ್ಕೃತಿಕ ಚಿಂತಕ ಜೆ.ಯಾದವರೆಡ್ಡಿ ಮಾತನಾಡುತ್ತ ಸಮಾಜದ ಬಗ್ಗೆ ಯಾರಲ್ಲಿ ಕಾಳಜಿಯಿರುತ್ತದೋ ಅಂತಹವರು ಸಂತರಾಗಬಹುದು. ಸಂತ ಶಿಶುನಾಳ ಷರೀಫರಿಗೆ

ಪರಿಸರ, ವಾತಾವರಣ, ಗುರುವಿನ ಪ್ರಭಾವಿ ಬೀರಿದ ಪರಿಣಾಮ ಇಂದಿಗೂ ಸಂತರೆನಿಸಿಕೊಂಡಿದ್ದಾರೆ. ಮಾನವ ಧರ್ಮ ಒಂದೆ ಎನ್ನುವ ಪ್ರತಿಪಾದನೆ ಅವರದಾಗಿತ್ತು.

ಧರ್ಮ, ಜಾತಿ, ಪಂಥ ಎನ್ನುವುದಕ್ಕಿಂತ ಮಾನವೀಯತೆ, ಮನುಷ್ಯತ್ವವನ್ನು ತತ್ವಪದಗಳ ಮೂಲಕ ಸಾರಿದರು ಎಂದು ಗುಣಗಾನ ಮಾಡಿದರು.

ನಿಂತ ನಿಂತಲ್ಲೆ ಹಾಡು ಕಟ್ಟಿ ಹಾಡುವಂತ ಶಕ್ತಿ ಸಂತ ಶಿಶುನಾಳ ಷರೀಫರಲ್ಲಿದ್ದುದರಿಂದಲೆ ಎಲ್ಲರ ಮನದಲ್ಲಿ ಅವರತತ್ವಗಳುಇಂದಿಗೂಜೀವಂತವಾಗಿವೆ. ಮೋಹ, ಸ್ವಾರ್ಥ, ಲೋಭ, ಧಾರ್ಮಿಕ ಅಂಧಕಾರ ಸಂತಶಿಶುನಾಳ ಷರೀಫರಲ್ಲಿ ಇರಲಿಲ್ಲ. ಸಹಜ ಪ್ರೀತಿಯಿತ್ತು. ಅದಕ್ಕಾಗಿ ದೈತ್ಯ ವರಕವಿ ಎನಿಸಿಕೊಂಡಿದ್ದಾರೆ. ನೈತಿಕ ಪಾಠಗಳು, ಜಾತಿ ಮೀರಿದ ಸಿದ್ದಾಂತ ಅವರದಾಗಿತ್ತು. ಅಮೋಘವಾದ ಹಾಡು, ರಾಗ, ಸ್ವರ, ಸಂಯೋಜನೆಯಿತ್ತು. ಸಿದ್ದಾಂತಕ್ಕಿಂತ ಮನುಷ್ಯ ಧರ್ಮ ದೊಡ್ಡದೆನ್ನುವುದು ಅವರ ಕಲ್ಪನೆಯಾಗಿತ್ತು ಎಂದು ಹೇಳಿದರು.

ಚಿತ್ರದುರ್ಗ ನಗರಾಭಿವೃದ್ದಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಮಾತನಾಡಿ ಸಂತಶಿಶುನಾಳ ಷರೀಫರು ಗುರು ಗೋವಿಂದಭಟ್ಟರ ಸಂಬಂಧ ಅನ್ಯೋನ್ಯವಾಗಿತ್ತು. ಭಾಷೆ, ಧರ್ಮ, ಜಾತಿಯನ್ನು ಮೀರಿ ನಿಂತವರು ಸಂತಶಿಶುನಾಳ ಷರೀಫರು. ಭಾರತ ದೇಶ ಅನೇಕ ಜಾತಿ, ಧರ್ಮ, ವೈವಿದ್ಯತೆಯಿಂದ ಕೂಡಿದೆ. ಉರ್ದು ಕೇವಲ ಮುಸಲ್ಮಾನರ ಭಾಷೆ ಎಂಬ ತಪ್ಪು ಕಲ್ಪನೆಯಿದೆ. ನಾಲ್ಕು ಭಾಷೆಗಳನ್ನು ಕಲಿಯುವ ಅವಕಾಶ ಉರ್ದು ಶಾಲೆಯಲ್ಲಿದೆ. ಒಂದರಿಂದ ಏಳನೆ ತರಗತಿವರೆಗೆ ನಾನು ಕೂಡ ಉರ್ದು ಶಾಲೆಯಲ್ಲಿ ಓದಿದ್ದೇನೆ. ಅನೇಕ ದೊಡ್ಡ ದೊಡ್ಡ ಮಹನೀಯರು ಉರ್ದು ಶಾಲೆಗಳಲ್ಲಿ ಓದಿದ್ದಾರೆಂದು ತಿಳಿಸಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಡಾ.ದೊಡ್ಡಮಲ್ಲಯ್ಯ ಮಾತನಾಡುತ್ತ ಜಾತಿ, ಧರ್ಮದ ತಾರಮಯ್ಯ ಸಂತ ಶಿಶುನಾಳ ಷರೀಫರಲ್ಲಿರಲಿಲ್ಲ. ಅಂತಹ ಸಂತನನ್ನು ಜ್ಞಾಪಿಸಿಕೊಳ್ಳುವುದೆಂದರೆ ಸುಲಭವಲ್ಲ. ಜಾತಿ, ಮತ, ಧರ್ಮ, ಪಂಥವನ್ನು ದಾಟಿದ ಸಹಜ ಬದುಕು ಅವರದು. ಬದುಕಿನ ಸತ್ಯ ಹೇಳುತ್ತ ಸಮಾಜ ಸುಧಾರಣೆಗೆ ಶ್ರಮಿಸಿದವರು. ಇಂದಿನ ಯುವ ಪೀಳಿಗೆರೆ ಸಂತಶಿಶುನಾಳ ಷರೀಫರ ವಿಚಾರಗಳನ್ನು ತಿಳಿಸಬೇಕಿದೆ. ಉರ್ದು ಭಾರತೀಯ ಭಾಷೆ. ಸಂಸ್ಕೃತಿ ಬದುಕಿನ ಕ್ರಮಗಳಿಂದ ಸಹಜವಾಗಿ ಅರಳುತ್ತದೆ ಎಂದರು.

ಲೋಕಾಯುಕ್ತ ಅಭಿಯೋಜಕ ಮಲ್ಲೇಶಪ್ಪ ಮಾತನಾಡಿ ಸಾವಿರಾರು ವರ್ಷಗಳ ಇತಿಹಾಸವಿರುವ ಕನ್ನಡಕ್ಕೆ ಅನೇಕ ಸಾಹಿತಿ, ವಚನಕಾರರ ಕೊಡುಗೆಯಿದೆ. ಸಂತಶಿಶುನಾಳ ಷರೀಫರು ತತ್ವಪದಗಳ ಮೂಲಕ ಸಮಾಜದಲ್ಲಿನ ಅಂಧಕಾರವನ್ನು ಕಳೆದರು. ಜಾತಿ, ಧರ್ಮದ ಸಂಕೋಲೆಯಿಂದ ಮನುಷ್ಯ ಮೊದಲು ಹೊರಬರಬೇಕೆಂಬ ಸಂದೇಶವನ್ನು ಸಾರಿದ ಮಹಾನ್ ಸಂತ ಎಂದು ಬಣ್ಣಿಸಿದರು.

ಕರ್ನಾಟಕ ಶಾಂತಿ ಮತ್ತು ಸೌಹಾರ್ದ ವೇದಿಕೆಅಧ್ಯಕ್ಷನರೇನಹಳ್ಳಿಅರುಣ್‌ಕುಮಾರ್ ಮಾತನಾಡಿ ಭಾಷೆ, ಜಾತಿ, ಧರ್ಮಕ್ಕಿಂತ ಮನುಷ್ಯತ್ವ, ಮಾನವೀಯತೆ ದೊಡ್ಡದು

ಎನ್ನುವ ಸಂದೇಶವನ್ನು ಸಾರಿದ ಸಂತಶಿಶುನಾಳ ಷರೀಫರು ತತ್ವಪದಗಳ ಮೂಲಕ ಇಂದಿಗೂ ಜನಮಾನಸದಲ್ಲಿ ಉಳಿದಿದ್ದಾರೆ. ಜಾತಿ, ಧರ್ಮಗಳ ನಡುವೆ ಅಶಾಂತಿಯುಂಟು ಮಾಡುತ್ತಿರುವ ಇಂದಿನ ದಿನಮಾನಗಳಲ್ಲಿ ಸಂತಶಿಶುನಾಳ ಷರೀಫರ ತತ್ವಪದಗಳ ಅಗತ್ಯವಿದೆ. ಬಸವಣ್ಣ, ಬುದ್ದ, ಅಂಬೇಡ್ಕರ್ ಇವರುಗಳ ಕ್ರಾಂತಿಯಿಂದ ಸಮಾಜದಲ್ಲಿ ಸೌಹಾರ್ದತೆ, ಸಹಭಾಳ್ವೆಯಿದೆ ಎಂದು ಹೇಳಿದರು.

ಸರ್ಕಾರಿ ಉರ್ದು ಪ್ರಾಥಮಿಕ ಶಾಲೆಯ ಎಸ್.ಡಿ.ಎಂ.ಸಿ. ಅಧ್ಯಕ್ಷ ಸೈಯದ್ ಜಿಯಾವುಲ್ಲಾ, ಮುಖ್ಯ ಶಿಕ್ಷಕಿ ಮೆಹರುನ್ನಿಸಾ, ಕರ್ನಾಟಕ ಮುಸ್ಲಿಂ ಕಲ್ಚರಲ್ ಅಕಾಡೆಮಿ ಅಧ್ಯಕ್ಷ ಎಂ.ಹನೀಫ್, ಉಪಾಧ್ಯಕ್ಷ ಸೈಯದ್ ತಬ್ರೇಜ್ ಹಾಶ್ಮಿ, ಕಾರ್ಯಾಧ್ಯಕ್ಷ ನವೀದ್ ಅಬ್ದುಲ್ಲಾ ಇವರುಗಳು ವೇದಿಕೆಯಲ್ಲಿದ್ದರು.

ಡಿ.ಕುಮಾರ್ ಮತ್ತು ತಂಡ, ಚನ್ನಬಸಪ್ಪ ಇವರುಗಳು ಸಂತಶಿಶುನಾಳ ಷರೀಫರ ತತ್ವಪದಗಳನ್ನು ಹಾಡಿದರು.

## ಚಳ್ಳಕೆರೆ ಕ್ಷೇತ್ರದ ಸರ್ವಾಂಗೀಣ ಅಭಿವೃದ್ದಿಗೆ ಹೆಚ್ಚು ಶಕ್ತಿ ನೀಡಲು ಆಂಜನೇಯನನಲ್ಲಿ ಪ್ರಾರ್ಥನೆ : ಶಾಸಕ ರಘುಮೂರ್ತಿ

» **ಚಳ್ಳಕೆರೆ**

ನಗರದ ನಾಯಕನಹಟ್ಟಿ ರಸ್ತೆಯಲ್ಲಿರುವ ಶ್ರೀಕರೇಕಲ್ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ನಡೆದ ಧನುರ್ಮಾಸದ ವಿಶೇಷ ಪೂಜಾ ಕಾರ್ಯಕ್ರಮದಲ್ಲಿ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿ ಮಂಡಳಿ ಅಧ್ಯಕ್ಷ ಟಿ.ರಘು ಮೂರ್ತಿ ಪಾಲ್ಗೊಂಡು ನೆರೆದಿದ್ದ ಭಕ್ತರನ್ನು ಉದ್ದೇಶಿಸಿ ಮಾತನಾಡಿದರು. ಭಗವಂತನ ಧಯೆಯಿಂದ ಉತ್ತಮ ಮಳೆಯಾಗಿದ್ದು, ಈ ಭಾಗದಲ್ಲಿ ನೀರಿನ ಕೊರತೆಗೆ ವಿರಾಮದೊರಕಿದೆ. ಕ್ಷೇತ್ರದಅಭಿವೃದ್ದಿಗೆಸಂಬಂಧಪಟ್ಟಂತೆ ಸರ್ಕಾರದಿಂದ ಹಲವಾರು



ಯೋಜನೆಗಳ ಅನುಷ್ಠಾನಕ್ಕೆ ಆರ್ಥಿಕ ನೆರವಿನ ಅವಶ್ಯಕತೆ ಇದ್ದು ಈ ಬಗ್ಗೆ ಮುಖ್ಯಮಂತ್ರಿಗಳೊಂದಿಗೆ ಚರ್ಚೆ ನಡೆಸಲಾಗಿದೆ. ಚಳ್ಳಕೆರೆ ನಗರದ ಯುಜಿಡಿ ಕಾಮಗಾರಿ ಹಾಗೂ ರಾಜಕಾಲುವೆ ರಿಪೇರಿ ಕಾಮಗಾರಿ ಶೀಘ್ರದಲ್ಲೇ ಆರಂಭವಾಗಲಿದೆ. ನನ್ನ ಎಲ್ಲಾ ಕೆಲಸ ಕಾರ್ಯಗಳಿಂದ ಶ್ರೀಆಂಜನೇಯಸ್ವಾಮಿಯೇ ಸ್ಫೂರ್ತಿ. ಕ್ಷೇತ್ರದ ಅಭಿವೃದ್ದಿ ವಿಚಾರದಲ್ಲಿ ಪಕ್ಷಬೇದವಿಲ್ಲದೆ ಕಾರ್ಯನಿರ್ವಹಿಸುವೆ, ಕರೇಕಲ್ ಆಂಜನೇಯಸ್ವಾಮಿ ಇನ್ನೂ ಹೆಚ್ಚಿನ ಸೇವೆ ನಿರ್ವಹಿಸಲು ಶಕ್ತಿ ನೀಡಲಿ ಎಂದು ಪ್ರಾರ್ಥಿಸಿರುವುದಾಗಿ ತಿಳಿಸಿದರು.

## ಜಿಲ್ಲೆಯ 3584 ರೈತರಿಗೆ ರೂ.2333.01 ಲಕ್ಷ ವಿಮಾ ಮೊತ್ತ ಬಿಡುಗಡೆ: ಜಿಲ್ಲಾಧಿಕಾರಿ

» **ಚಿತ್ರದುರ್ಗ**

2023–24ನೇ ಸಾಲಿನಲ್ಲಿ ಮುಂಗಾರು ಹಂಗಾಮಿನ ಮರು ವಿನ್ಯಾಸಗೊಳಿಸಲಾದ ಹವಾಮಾನಾಧಾರಿತ ಬೆಳೆವಿಮೆ ಯೋಜನೆಯಡಿ ಚಿತ್ರದುರ್ಗ ಜಿಲ್ಲೆಯ 3584 ರೈತರಿಗೆ ರೂ.2333.01 ಲಕ್ಷ ವಿಮಾ ಮೊತ್ತವನ್ನು ಕ್ಷೇಮಾ ಇನ್ಸುರೆನ್ಸ್ ಕಂಪನಿಯರು ವಿಮಾದಾರರ ಖಾತೆಗೆ ಬಿಡುಗಡೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

ಮುಂಗಾರು ಹಂಗಾಮಿನ ಮರು ವಿನ್ಯಾಸಗೊಳಿಸಲಾದ ಹವಾಮಾನಧಾರಿತ ಬೆಳೆವಿಮೆ ಯೋಜನೆಯಡಿ ತೋಟಗಾರಿಕೆ ಬೆಳೆಗಳಾದ ಅಡಿಕೆ, ಮಾವು ಮತ್ತು ದಾಳಿಂಬೆ ಬೆಳೆಗೆ ಜಿಲ್ಲೆಯ 3648 ರೈತರು ರೂ.226.99 ಲಕ್ಷ ಪ್ರೀಮಿಯಂ ಪಾವತಿಸಿ ನೋಂದಾಯಿಸಿಕೊಂಡಿದ್ದು, ಈ ಪೈಕಿ 3584 ರೈತರಿಗೆ ರೂ.2333.01 ಲಕ್ಷ ವಿಮಾ ಮೊತ್ತವನ್ನು ಕ್ಷೇಮಾ ಇನ್ಸುರೆನ್ಸ್ ಕಂಪನಿಯರು ಜಿಲ್ಲೆ ಎಲ್ಲಾ ವಿಮಾದಾರರ ಖಾತೆಗೆ ಬಿಡುಗಡೆ ಮಾಡಿರುತ್ತಾರೆ. ಈ ಯೋಜನೆಯನ್ನು ಯಶಸ್ವಿಯಾಗಿ ಅನುಷ್ಠಾನ ಮಾಡಲು ಸಹಕರಿಸಿದ ಜಿಲ್ಲೆಯ ಎಲ್ಲ ರೈತರಿಗೆ ಅಭಿನಂದನೆ ಸಲ್ಲಿಸುತ್ತಾ, ಮುಂದಿನ ದಿನಗಳಲ್ಲಿ ಈ ಯೋಜನೆ ಅನುಷ್ಟಾನ ಮಾಡಲು ಸಹಕರಿಸಲು ಕೋರಿದ್ದಾರೆ.

ಮುಂದಿನ ವರ್ಷಗಳಲ್ಲಿ ಈ ಯೋಜನೆಯಡಿ ನೋಂದಾಯಿಸಿಕೊಳ್ಳುವ ರೈತರು ಯೋಜನೆಯ ಸದುಪಯೋಗ ಪಡೆಯಲು ಬೆಳೆ ಸಮೀಕ್ಷೆ ತಂತ್ರಾಂಶದಲ್ಲಿ ಕಡ್ಡಾಯವಾಗಿ ಬೆಳೆಯನ್ನು ಇಂದೀಕರಿಸಬೇಕು ಹಾಗೂ ಹಿಂದಿನ 2 ವರ್ಷಗಳಲ್ಲಿ ಬೆಳೆ ಸಮೀಕ್ಷೆ ತಂತ್ರಾಂಶದಲ್ಲಿ ಕಡ್ಡಾಯವಾಗಿ ಬೆಳೆಯನ್ನು ನೊಂದಾಯಿಸಿಕೊಂಡಿರಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

### ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ಎಸ್.ನಾಗಸಮುದ್ರ

# ಸಾರ್ವಜನಿಕರಿಗೆ ಉಚಿತವಾಗಿ ನಿತ್ಯವೂ ಯೋಗ, ಧ್ಯಾನ, ಪ್ರಾಣಾಯಾಮ ಕಲಿಕೆ ಆಯುಷ್ ಚಿಕಿತ್ಸೆ, ಜೀವನಶೈಲಿಯಿಂದ ಆರೋಗ್ಯಕರ ಜೀವನ

» **ಚಿತ್ರದುರ್ಗ**

ಸಾರ್ವಜನಿಕರು ಆಯುಷ್ ಪದ್ಧತಿಯ ಚಿಕಿತ್ಸೆ ಹಾಗೂ ಜೀವನ ಶೈಲಿ ಅಳವಡಿಸಿಕೊಂಡು ಆರೋಗ್ಯಕರ ಜೀವನ ತಮ್ಮದಾಗಿಸಿಕೊಳ್ಳಬೇಕು ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ಎಸ್. ನಾಗಸಮುದ್ರ ತಿಳಿಸಿದ್ದಾರೆ.

ಜಿಲ್ಲಾ ಆಯುಷ್ ಇಲಾಖೆ ವತಿಯಿಂದ ಸಾರ್ವಜನಿಕರಿಗೆ ಆಯುಷ್ ಸೇವೆಗಳು ಜಿಲ್ಲೆಯಾದ್ಯಂತ ಉಚಿತವಾಗಿ ಲಭ್ಯವಿದೆ. ಬಹುತೇಕ ಗ್ರಾಮೀಣ ಭಾಗದಲ್ಲಿ ಇರುವ ಆಯುರ್ವೇದ ಚಿಕಿತ್ಸಾಲಯಗಳ ಮೂಲಕ ಉಚಿತ ಆಯುರ್ವೇದ ಚಿಕಿತ್ಸೆ ನೀಡಲಾಗುತ್ತಿದೆ.ಜಿಲ್ಲೆಯಲ್ಲಿ 32 ಸರ್ಕಾರಿ ಆಯುರ್ವೇದ ಚಿಕಿತ್ಸಾಲಯಗಳಿದ್ದು, ಎಲ್ಲಾ ವ್ಯಾಧಿಗಳಿಗೆ ಆಯುರ್ವೇದದ ಪ್ರಾಥಮಿಕ ಚಿಕಿತ್ಸೆಗಳು ಲಭ್ಯವಿವೆ. ಈ 32 ಚಿಕಿತ್ಸಾಲಯಗಳಲ್ಲಿ 10ನ್ನು ಆಯುಷ್ ಆರೋಗ್ಯಮಂದಿರಗಳನ್ನಾಗಿ ಉನ್ನತೀಕರಿಸಿದ್ದು, ಈ ಕೇಂದ್ರಗಳಲ್ಲಿ ಚಿಕಿತ್ಸೆಯೊಂದಿಗೆ ರೋಗಾನುಸಾರಪಥ್ಯ, ಜೀವನಶೈಲಿ, ಯೋಗ, ಧ್ಯಾನ ಪ್ರಾಣಾಯಾಮ ತಿಳಿಸಲಾಗುವುದು. ಹಾಗೂ ಸಾರ್ವಜನಿಕರಿಗೆ ಉಚಿತವಾಗಿ ದಿನನಿತ್ಯವೂಯೋಗ,ಧ್ಯಾನಪ್ರಾಣಾಯಾಮ ಕಲಿಸಲಾಗುವುದು.ಚಿತ್ರದುರ್ಗ ತಾಲ್ಲೂಕಿನ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯ, ಜೆ.ಎನ್.ಕೋಟೆ,ಅಳಗವಾಡಿ,ಹಿರಿಯೂರು ತಾಲ್ಲೂಕಿನ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯ, ಸೊಂಡೆಕೆರೆ, ಚಳ್ಳಕೆರೆ ತಾಲ್ಲೂಕಿನ ಸರ್ಕಾರಿ ಆಯುರ್ವೇದ ಚಿಕಿತ್ಸಾಲಯ, ನನ್ನಿವಾಳ, ಹಿರೇಹಳ್ಳಿ, ಓಬಳಾಪುರ ,ಹುಲಿಕುಂಟೆ. ಹೊಸದುರ್ಗ ತಾಲ್ಲೂಕಿನ. ಆಲಘಟ್ಟ, ಕಂಗುವಳ್ಳಿ, ಹೆಬ್ಬಳ್ಳಿ ಇವು ಆಯುಷ್ ಆರೋಗ್ಯಮಂದಿರಗಳಾಗಿ ಮೇಲ್ದರ್ಜೆಗೇರಿಸಲ್ಪಟ್ಟ ಚಿಕಿತ್ಸಾಲಾ ಯಗಳಾಗಿವೆ.ಜಿಲ್ಲೆಯಲ್ಲಿ ನಾಲ್ಕು ಆಯುರ್ವೇದ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿದ್ದು, ಇಲ್ಲಿ ಮುಂದುವರೆದ ಹಾಗೂ ಆಯುರ್ವೇದ ವಿಶೇಷ ಚಿಕಿತ್ಸೆಗಳಾದ ಅಭ್ಯಂಗ, ಕಟಿಬಸ್ತಿ, ಜಾನುಬಸ್ತಿ, ಪಂಚಕರ್ಮ ಇತ್ಯಾದಿ ಚಿಕಿತ್ಸೆಗಳು ಉಚಿತವಾಗಿ ಲಭ್ಯವಿವೆ.

ಜಿಲ್ಲೆಯ, ಹೊಸದುರ್ಗ, ದೊಡ್ಡತೇಕಲವಟ್ಟಿ, ಚಳ್ಳಕೆರೆ ಹಾಗೂ ಹಿರಿಯೂರು ಇಲ್ಲಿ ಸರ್ಕಾರಿ ಆಯುರ್ವೇದ ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿವೆ. ಇವುಗಳಲ್ಲಿ ಹಿರಿಯೂರು ಹಾಗೂ ಚಳ್ಳಕೆರೆಯಲ್ಲಿ ಮೂಲವ್ಯಾಧಿಗೆ ಸಮರ್ಪಕ ಆಯುರ್ವೇದ ಚಿಕಿತ್ಸೆಯಾದ ಕ್ಷಾರಸೂತ್ರ ತಜ್ಞರು ಲಭ್ಯವಿದ್ದು, ಚಳ್ಳಕೆರೆಯಲ್ಲಿ ಇದಕ್ಕೆ ಸಂಬಂದಿಸಿದ ಮಹಿಳಾ ತಜ್ಞ ವೈದ್ಯರು ಲಭ್ಯವಿರುತ್ತಾರೆ.ಕಿವಿಮೂಗು, ಗಂಟಲಿನ ಆಯುರ್ವೇದ ತಜ್ಞರು ಚಳ್ಳಕೆರೆಯ ಆಯುರ್ವೇದ ಆಸ್ಪತ್ರೆಯಲ್ಲಿ ಲಭ್ಯವಿರುತ್ತಾರೆ. ಜಿಲ್ಲಾಸ್ಪತ್ರೆಯ ಆಯುಷ್ ವಿಭಾಗವು ಚಿತ್ರದುರ್ಗದ ಚಳ್ಳಕೆರೆ ರಸ್ತೆಯ ಆದಿಶಕ್ತಿನಗರ, ಮೂರನೇ ತಿರುವಿನಲ್ಲಿ ಕಾರ್ಯ ನಿರ್ವಹಿಸುತ್ತಿದ್ದು, ಇಲ್ಲಿ ಆಯುರ್ವೇದ, ಯುನಾನಿ ಹಾಗೂ



ಹೋಮಿಯೋಪಥಿ ಪದ್ಧತಿಗಳಲ್ಲಿ ಚಿಕಿತ್ಸೆ ಲಭ್ಯವಿರುತ್ತದೆ. ಆಯುರ್ವೇದದ ವಿಶೇಷ ಚಿಕಿತ್ಸೆಯಾದ ಪಂಚಕರ್ಮದ ತಜ್ಞರು ಇಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಸಾರ್ವಜನಿಕರಿಗೆ ಪಂಚಕರ್ಮ ಸೇವೆಗಳೂ ಲಭ್ಯವಿವೆ.ಆಯುರ್ವೇದ, ಯೋಗ, ಧ್ಯಾನ, ಪ್ರಾಣಾಯಾಮಗಳು ಭಾರತ ಪ್ರಪಂಚಕ್ಕೆ ಕೊಟ್ಟ ಅತ್ಯಮೂಲ್ಯ ಕೊಡುಗೆಗಳು. ಇಂದಿಗೂ ಸುರಕ್ಷಿತ ಹಾಗೂ ಪರಿಪೂರ್ಣ ಚಿಕಿತ್ಸೆಯ ವಿಚಾರ ಬಂದಾಗ ಪ್ರಪಂಚವೇ ಭಾರತೀಯ ವೈದ್ಯಪದ್ಧತಿಗಳು ಗಮನಹರಿಸುತ್ತದೆ. ಹೊಸ ಹೊಸ ಸಂಶೋಧನೆ ಆಧುನಿಕ ತಂತ್ರಜ್ಞಾನಗಳನ್ನು ಮೈಗೂಡಿಸಿಕೊಂಡು ಆಯುಷ್ ಪದ್ಧತಿಗಳು ಜಾಗತಿಕ ಮಟ್ಟಕ್ಕೇರಿವೆ. ಆಯುರ್ವೇದ ಚಿಕಿತ್ಸೆಗೆ ಬೇಡಿಕೆಯು ದಿನೇದಿನೇ ಹೆಚ್ಚುತ್ತಿದೆ.

ಂಜಗಖಉ ಎಂದರೆ ಆಯುರ್ವೇದ, ಯೋಗ ಹಾಗೂ ಪ್ರಕೃತಿ ಚಿಕಿತ್ಸೆ, ಯುನಾನಿ, ಸಿದ್ಧ ಮತ್ತು ಹೋಮಿಯೋಪತಿ.

**ಆಯುರ್ವೇದ:** ಚಿಕಿತ್ಸೆಗಿಂತ ಆರೋಗ್ಯ ಕಾಪಾಡಲು ಹೆಚ್ಚು ಒತ್ತು ಕೊಡುವ ಈ ಚಿಕಿತ್ಸಾ ಪದ್ಧತಿಯಲ್ಲಿ ಆಧುನಿಕ ಜೀವನಶೈಲಿಯಿಂದ ಹೆಚ್ಚುತ್ತಿರುವ ಮಾನಸಿಕ ಒತ್ತಡ, ಮಧುಮೇಹ, ರಕ್ತದ ಒತ್ತಡ ಇತ್ಯಾದಿ ಅಸಾಂಕ್ರಾಮಿಕ ರೋಗಗಳಿಗೆ ಸಮರ್ಥ ಚಿಕಿತ್ಸೆಗಳಿವೆ. ರೋಗ ನಿರೋಧಕ ಶಕ್ತಿ ಹೆಚ್ಚಿಸಿ ರೋಗವೇ ಬರದಂತೆ ಕಾಪಾಡುವ ಪಂಚಕರ್ಮ, ದಿನಚರ್ಯ, ಋತುಚರ್ಯ, ಆರೋಗ್ಯಕರ ಜೀವನಶೈಲಿ, ಆಹಾರ ಪದ್ಧತಿ, ಮಾನಸಿಕ ಚಿಕಿತ್ಸೆ ಹೀಗೆ, ಕೇವಲ ಚಿಕಿತ್ಸೆ ಅಲ್ಲ ಮಾನವ ಜನನದಿಂದ ಮರಣದವರೆಗೆ ಸುಖವಾಗಿ, ಹಿತವಾಗಿ ಬದುಕಲು ಅವಶ್ಯವಿರುವ ಎಲ್ಲಾ ತತ್ವಗಳೂ ಆಯುರ್ವೇದದಲ್ಲಿವೆ.

**ಯೋಗ ಹಾಗೂ ಪ್ರಕೃತಿಚಿಕಿತ್ಸೆ:** ಒತ್ತಡ ನಿರ್ವಹಣೆಗೆ ಯೋಗ ಪದ್ಧತಿಯಲ್ಲಿ ಹೇಳಿದ ಧ್ಯಾನ, ಪ್ರಾಣಾಯಾಮಕ್ಕಿಂತ ಉತ್ತಮ ಮಾರ್ಗ ಬೇರೊಂದಿಲ್ಲ. ಗಾಳಿ, ನೀರು, ಮಣ್ಣು, ಸೊಪ್ಪು, ತರಕಾರಿ ಹಣ್ಣುಗಳನ್ನೇ ಬಳಸಿ ಔಷಧಿ ರಹಿತವಾಗಿ ವ್ಯಾಧಿಶಮನ ಮಾಡುವ ವಿಶಿಷ್ಟ ಪದ್ಧತಿ ಪ್ರಕೃತಿಚಿಕಿತ್ಸೆ.

**ಯುನಾನಿ:** ಗ್ರೀಕ್ ಮತ್ತು ಅರಬ್ ಮೂಲಕ ವೈದ್ಯಪದ್ಧತಿಯಾದರೂ ನಮ್ಮ ನೆಲದ ಸಸ್ಯಗಳನ್ನೂ ಬಳಸಿಕೊಂಡು ನಮ್ಮ ವೈದ್ಯ ಪದ್ಧತಿಯೆ ಆಗಿದ ಯುನಾನಿ ವೈದ್ಯ ಪದ್ಧತಿಯಲ್ಲಿ ಕಪ್ಪಿಂಗ್ ಥೆರಪಿ, ರಜಿಮಿನಲ್ ಥೆರಪಿಯಂತಹ ವಿಶಿಷ್ಟ ಚಿಕಿತ್ಸಾ ವಿಧಾನಗಳನ್ನು ಹೊಂದಿದೆ.

**ಸಿದ್ಧ:** ಸಸ್ಯಗಳಷ□□□ ಅಲ್ಲ ಲೋಹಗಳನ್ನೂ ಶುದ್ಧಿಕರಿಸಿ ಚಿಕಿತ್ಸೆಗೆ ಬಳಸಬಹುದೆಂದು ಜಗತ್ತಿಗೇ ತೋರಿಸಿ ಕೊಟ್ಟ ದಕ್ಷಿಣ ಭಾರತ ಮೂಲದ ಹೆಮ್ಮೆಯ ವೈದ್ಯಪದ್ಧತಿ ಇದು, ಸಿದ್ಧ ವೈದ್ಯಪದ್ಧತಿಯಲ್ಲಿ ಬಳಸುವ ಭಸ್ಮಗಳು ಇಂದಿನ ನ್ಯಾನೋ ತಂತ್ರಜ್ಞಾನವನ್ನು ಹೋಲುತ್ತವೆ. ಹಾಗೂ ಸೌವರಿಗ್ರಾಹಿಮಾಲಯದ ತಪ್ಪಲಿನ ನೇಪಾಳ ಮೂಲದ ಮೂಲಿಕಾ ವೈದ್ಯಪದ್ಧತಿ ಕ್ರಮೇಣ ಭಾರತಲ್ಲೂ ಜನಪ್ರಿಯತೆ ಪಡೆಯುತ್ತಿದೆ.

**ಹೋಮಿಯೋಪತಿ:** ಜರ್ಮನ್ಮೂಲದ ವೈದ್ಯಪದ್ಧತಿಯಾದರೂ ಭಾರತದಲ್ಲಿ ಹೆಚ್ಚು ಜನಪ್ರಿಯತೆ ಹೊಂದಿದೆ ಈ ಔಷಧಿಗಳು ಪ್ರಮಾಣದಲ್ಲಿ ಚಿಕ್ಕದಾದರೂ ಉತ್ಕೃಷ್ಣಗುಣಮಟ್ಟದ್ದಾಗಿವೆ. ಗಿಡಮೂಲಿಕೆಗಳ ಸಾರವರ್ಧಿಸಿ ಚಿಕ್ಕ ಚಿಕ್ಕ ಮಾತ್ರೆಗಳ ರೂಪದಲ್ಲಿ ಚಿಕಿತ್ಸೆಗೆ ಬಳಸಲಾಗುತ್ತದೆ.

ಆಯುಷ್ ಪದ್ಧತಿಗಳಲ್ಲಿ ಕೇವಲ ಚಿಕಿತ್ಸೆ ಮಾತ್ರವಲ್ಲ ಶಾರೀರಿಕವಾಗಿ ಹಾಗೂ ಮಾನಸಿಕವಾಗಿ ಆರೋಗ್ಯವಾಗಿರಲು ಬೇಕಾದ ಎಲ್ಲಾ ಆಂಶಗಳನ್ನು ವಿವರಿಸಿದ್ದಾರೆ. ಪರಿಪೂರ್ಣ ಆರೋಗ್ಯ ಬಯಸುವವರಿಗೆ ಆಯುಷ್ ಚಿಕಿತ್ಸಾಪದ್ಧತಿಗಳು ಅತ್ಯುತ್ತಮ ಆಯ್ಕೆಯಾಗಿವೆ ಎಂದು ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ಎಸ್. ನಾಗಸಮುದ್ರ ತಿಳಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಅವಧಿ ವಿಸ್ತರಣೆ

» ದಾವಣಗೆರೆ

ಪ್ರಸಕ್ತ ಸಾಲಿನ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಸ್ನಾತಕೋತ್ತರ ಪದವಿ ಹಾಗೂ ಪಿ.ಹೆಚ್.ಡಿ. ಮಾಡುವ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಹಾಗೂ 3ಬಿ ಗಳಿಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಂದ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ನೀಡುವ ಡಿ.ದೇವರಾಜ ಅರಸು ವಿದೇಶಿ ವ್ಯಾಸಂಗ ವೇತನಕ್ಕಾಗಿ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಿದ್ದು, ಅರ್ಜಿಯ ಅವಧಿಯನ್ನು ಜನವರಿ 15 ರವರೆಗೆ ವಿಸ್ತರಿಸಲಾಗಿದೆ.

### ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ

» ದಾವಣಗೆರೆ

ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಎಸ್‌ಬಿಐ ಮತ್ತು ಇತರೆ ಬ್ಯಾಂಕ್ ಅಧಿಕಾರಿಗಳ ಮತ್ತು ಗುಮಾಸ್ತರ ಹುದ್ದೆಗಳಿಗೆ ನಡೆಸುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಮೈಸೂರಿನ ಕೇಂದ್ರ ಕಚೇರಿಯಲ್ಲಿ 45 ದಿನಗಳ ತರಬೇತಿಯನ್ನು ನಡೆಸಲಾಗುವುದು. ಆಸಕ್ತರು ಜನವರಿ 8 ರೊಳಗಾಗಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 0821-2515944 ಕರಾಮುವಿ ಕುಲಸಚಿವ ಪ್ರೊ. ಕೆ.ಬಿ.ಪ್ರವೀಣ ತಿಳಿಸಿದ್ದಾರೆ.

### ಬೆಳೆ ಸಮೀಕ್ಷೆಗೆ ರೈತರ ಆ್ಯಪ್ ಬಿಡುಗಡೆ

» ದಾವಣಗೆರೆ

ಇ-ಆಡಳಿತ ಮತ್ತು ಕೃಷಿ ಇಲಾಖೆ ಇವರ ಸಹಯೋಗದೊಂದಿಗೆ ಪ್ರಸಕ್ತ ಸಾಲಿನ ಹಿಂಗಾರು ಹಂಗಾಮಿನ ಬೆಳೆ ಸಮೀಕ್ಷೆಗೆ ರೈತರ ಆ್ಯಪ್ ಬಿಡುಗಡೆ ಮಾಡಲಾಗಿದೆ. ರೈತರು ಗೂಗಲ್ ಪ್ಲೇ ಸ್ಟೋರ್‌ನಿಂದ ಹಿಂಗಾರು ರೈತರ ಬೆಳೆ ಸಮೀಕ್ಷೆ 2024-25 ಆ್ಯಪ್ ಡೌನ್ ಲೋಡ್ ಮಾಡಿಕೊಂಡು ತಾವು ಬೆಳೆದ ಬೆಳೆ ಮಾಹಿತಿಯೊಂದಿಗೆ ಛಾಯಾಚಿತ್ರವನ್ನು ಅಪ್‌ಲೋಡ್ ಮಾಡಬೇಕು. ಈ ಮಾಹಿತಿಯನ್ನು ಬೆಳೆ ವಿಮೆ, ಬೆಳೆ ನಷ್ಟ ಪರಿಹಾರ, ಬೆಂಬಲ ಬೆಲೆ ಮತ್ತು ಸರ್ಕಾರದ ವಿವಿಧ ಯೋಜನೆಯಡಿ ಸವಲತ್ತುಗಳನ್ನು ಒದಗಿಸಲು ಬಳಸಲಾಗುತ್ತದೆ. ಆದ್ದರಿಂದ ರೈತರು ಬೆಳೆ ಸಮೀಕ್ಷೆಯಲ್ಲಿ ಪಾಲ್ಗೊಂಡು ತಮ್ಮ ಜಮೀನಿನ ಬೆಳೆ ಮಾಹಿತಿಯನ್ನು ದಾಖಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ಗ್ರಾಮ ಆಡಳಿತ ಅಧಿಕಾರಿ ಅಥವಾ ಆಯಾ ಗ್ರಾಮಗಳಿಗೆ ನಿಯೋಜಿಸಿದ ಖಾಸಗಿ ನಿವಾಸಿಗಳ ಸಹಾಯದೊಂದಿಗೆ ಬೆಳೆ ಮಾಹಿತಿಯನ್ನು ದಾಖಲಿಸಿಕೊಳ್ಳಬಹುದೆಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

### ಸಾರಿಗೆ ನಿಯಮ ಉಲ್ಲಂಘಿಸಿದ ಆಟೋರಿಕ್ಷಾ ಮೇಲೆ ಪ್ರಕರಣ ದಾಖಲಿಸಿ ದಂಡ ವಸೂಲಿ

» ದಾವಣಗೆರೆ

ದಾವಣಗೆರೆ ನಗರದಲ್ಲಿ ಸಂಚರಿಸುವ ಆಟೋರಿಕ್ಷಾ ಆಸನ ಸಾಮರ್ಥ್ಯಕ್ಕಿಂತ ಅಧಿಕ ಪ್ರಯಾಣಿಕರನ್ನು ಸಾಗಿಸುವುದು, ಮೀಟರ್ ಅಳವಡಿಸದೇ ಇರುವುದು ಅರ್ಹತಾ ಪತ್ರ (ಎಫ್.ಸಿ) ವಿಮೆ ಇಲ್ಲದೇ ನಿಯಮ ಉಲ್ಲಂಘಿಸಿ ಸಂಚರಿಸುತ್ತಿರುವುದನ್ನು ಕಂಡು ಬಂದ ಹಿನ್ನಲೆಯಲ್ಲಿ ನಿರಂತರವಾಗಿ ಪ್ರಕರಣ ದಾಖಲಿಸುವ ಮೂಲಕ ಆಟೋರಿಕ್ಷಾ ಚಾಲಕರಲ್ಲಿ ನಿಯಮಗಳ ಬಗ್ಗೆ ಜಾಗೃತಿ ಮೂಡಿಸುತ್ತಿದ್ದು ನಿಯಮ ಉಲ್ಲಂಘಿಸಿ ಸಂಚರಿಸುತ್ತಿದ್ದ 164 ಆಟೋರಿಕ್ಷಾ ಮೇಲೆ ಪ್ರಕರಣ ದಾಖಲಿಸಿ ರೂ.2,65,600/-ಗಳ ದಂಡ ಮೊತ್ತವನ್ನು ಸಂಗ್ರಹಿಸಲಾಗಿರುತ್ತದೆ ಎಂದು ಪ್ರಾದೇಶಿಕ ಸಾರಿಗೆ ಅಧಿಕಾರಿ ಪ್ರಮುತೇಶ್ ತಿಳಿಸಿದ್ದಾರೆ.

### ಡಿಸೆಂಬರ್ ಮಾಹೆಗೆ ಆಹಾರ ಧಾನ್ಯ ಹಂಚಿಕೆ

» ದಾವಣಗೆರೆ

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ನ್ಯಾಮತಿ ತಾಲ್ಲೂಕಿನ ಪಡಿತರ ಚೀಟಿದಾರರಿಗೆ ಡಿಸೆಂಬರ್ ಮಾಹೆಯಲ್ಲಿ ಬಿಡುಗಡೆಯಾದ ಪಡಿತರ ಆಹಾರ ಧಾನ್ಯವನ್ನು ಹಂಚಿಕೆ ಮಾಡಲಾಗಿದೆ. ಅಂತ್ಯೋದಯ ಪಡಿತರ ಚೀಟಿದಾರರಿಗೆ 35 ಕೆ.ಜಿ ಅಕ್ಕಿ ಪ್ರತಿ ಕಾರ್ಡಿಗೆ, ಆದ್ಯತಾ ಹಾಗೂ ಬಿ.ಪಿ.ಎಲ್ ಪಡಿತರ ಚೀಟಿದಾರರಿಗೆ 5 ಕೆ.ಜಿ ಅಕ್ಕಿ ಮತ್ತು ಪ್ರತಿ ಸದಸ್ಯರಿಗೆ ಉಚಿತವಾಗಿ ವಿತರಿಸಲಾಗುತ್ತದೆ. ಹಾಗೂ ಪ್ರತಿ ಕೆ.ಜಿ ಗೆ ರೂ.15ರಂತೆ ಒಪ್ಪಿಗೆ ನೀಡಿದ ಎ.ಪಿ.ಎಲ್ ಏಕ ಸದಸ್ಯ ಪಡಿತರ ಚೀಟಿದಾರರಿಗೆ 5ಕೆ.ಜಿ, ಎರಡು ಮತ್ತು ಹೆಚ್ಚಿನ ಸದಸ್ಯರನ್ನು ಹೊಂದಿರುವವರಿಗೆ 10ಕೆ.ಜಿ ಅಕ್ಕಿಯನ್ನು ವಿತರಿಸಲಾಗುವುದು. ಪಡಿತರ ಚೀಟಿದಾರರ ಖಾತೆಗೆ ನೇರ ನಗದು ವರ್ಗಾವಣೆ ಸಂಬಂಧಿಸಿದಂತೆ, ಪಡಿತರ ಚೀಟಿದಾರರು ಕಡ್ಡಾಯವಾಗಿ ತಮ್ಮ ಬ್ಯಾಂಕ್ ಖಾತೆಗೆ ಆಧಾರ್ ಜೋಡಣೆಯನ್ನು ಮಾಡಿಸಿಕೊಳ್ಳಬೇಕು ಹಾಗೂ ಹಣ ಪಡೆಯಲು ಯಾವುದೇ ತಾಂತ್ರಿಕ ಸಮಸ್ಯೆಗಳಿದ್ದಲ್ಲಿ ತಮ್ಮ ಬ್ಯಾಂಕ್ ಶಾಖೆಗಳಿಗೆ ಹಾಗೂ ಸ್ಥಳೀಯ ಆಹಾರ ನಿರೀಕ್ಷಕರನ್ನು ಸಂಪರ್ಕಿಸಿ ಸರಿಪಡಿಸಿಕೊಳ್ಳಬೇಕು ಎಂದು ನ್ಯಾಮತಿ ತಹಶೀಲ್ದಾರ್ ತಿಳಿಸಿದ್ದಾರೆ.

---

**ನಗರಂಗೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿವಿಧ ಕಾಮಗಾರಿಗಳ ಭೂಮಿ ಪೂಜೆ**

# ಜನಮೆಚ್ಚುವಂತಹ ಆಡಳಿತವನ್ನು ಗ್ರಾಪಂ ಕೇಂದ್ರ ನೀಡುವಂತಾಗಬೇಕು: ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ



ಗ್ರಾಮಪಂಚಾಯಿತಿ ಕೇಂದ್ರಗಳು ಜನಸ್ನೇಹಿ ಕೇಂದ್ರಗಳಾಗಿ ಕಾರ್ಯನಿರ್ವಹಿಸಬೇಕು, ಗ್ರಾಮೀಣ ಭಾಗದ ಜನರ ಸಮಸ್ಯೆಗಳಿಗೆ ಸಕಾರಾತ್ಮಕವಾಗಿ ಸ್ಪಂದಿಸಿ, ಚುನಾಯಿತ ಸದಸ್ಯರು ಮತ್ತು ಅಧಿಕಾರಿ ವರ್ಗ ಪರಸ್ಪರ ಚರ್ಚೆಯ ಮೂಲಕ ಗ್ರಾಮೀಣ ಭಾಗದ ಸಮಸ್ಯೆ ಹಾಗೂ ಅಭಿವೃದ್ಧಿಯ ಬಗ್ಗೆ ಚಿಂತನೆ ನಡೆಸಬೇಕು. ಮಹಾತ್ಮಗಾಂಧೀಜಿಯವರ ಕನಸು ನನಸು ಮಾಡಲು ಗ್ರಾಮ ಸೇವೆಯಿಂದ ಮಾತ್ರ ಎಂಬ ಸತ್ಯವನ್ನು ನಿರೂಪಿಸುವಂತೆ ಕಾರ್ಯನಿರ್ವಹಿಸಿ ಎಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಶನಿವಾರ ತಾಲ್ಲೂಕಿನ ನಗರಂಗೆರೆ ಗ್ರಾಮ ಪಂಚಾಯಿತಿಯ 65 ಲಕ್ಷ ವೆಚ್ಚದ ನೂತನ ಗ್ರಾಮ ಪಂಚಾಯಿತಿ ಕಟ್ಟಡ ನಿರ್ಮಾಣ, 65 ಲಕ್ಷ ವೆಚ್ಚದ ಎಸ್‌ಎಂಎಫ್ ಘಟಕ,ಲಕ್ಷ್ಮಿಪುರಗ್ರಾಮದಲ್ಲಿ ಮುಖ್ಯಮಂತ್ರಿಗಳ ಅನುದಾನದಡಿ 20 ಲಕ್ಷ ವೆಚ್ಚದ ಶ್ರೀಕೊಲ್ಲಾಪುರದಮ್ಮ ದೇವಸ್ಥಾನ, ಗ್ರಾಮದಲ್ಲಿ ಭೂಮಿ ಪೂಜೆ, 10 ಲಕ್ಷವೆಚ್ಚದಲ್ಲಿ ಹೆಚ್ಚುವರಿ ನೂತನ ಅರಿವು ಗ್ರಂಥಾಲಯ, ಸಿದ್ದಾಪುರ ಗ್ರಾಮದಲ್ಲಿ 10 ಲಕ್ಷವೆಚ್ಚದ ಈಶ್ವರದೇವಾಲಯದ ಭೂಮಿ ಪೂಜೆ ಕಾರ್ಯವನ್ನು ನೆರವೇರಿಸಿ ಮಾತನಾಡಿದರು. ಗ್ರಾಮೀಣ ಭಾಗದಲ್ಲಿ ಮುಖ್ಯಮಂತ್ರಿಗಳ ಅನುದಾನ, ಸರ್ಕಾರ ಹಲವಾರು ಯೋಜನೆಗಳ ಮೂಲಕ ಹಣ ಬಿಡುಗಡೆ ಮಾಡಿದ್ದು ಅವುಗಳನ್ನು ಸೂಕ್ತ ರೀತಿಯಲ್ಲಿ ಜನರ ಹಿತಕ್ಕಾಗಿ ಬಳಸುವ ಕೆಲಸ ನಿರಂತರ ನಡೆಯಬೇಕು. ಯಾವುದೇ ಹಂತದಲ್ಲೂ ಸರ್ಕಾರದ ನಿಯಮಗಳನ್ನು ನಿರ್ಲಕ್ಷಿಸಬಾರದು. ಗ್ರಾಮ ಪಂಚಾಯಿತಿ ಆಡಳಿತ ಜನರ ಮೆಚ್ಚುಗೆ ಪಡೆಯುವ ಮಟ್ಟಿಗೆ ಎಲ್ಲರೂ ಸಂಘಟನಾತ್ಮಕವಾಗಿ ಕಾರ್ಯನಿರ್ವಹಿಸಬೇಕು, ನೀವು ನೀಡುವ ಸೇವೆಯಿಂದ ಜನರಲ್ಲಿ ಸಂತೃಪ್ತಿ ಭಾವನೆ ಉಂಟಾಗಬೇಕು ಎಂದರು.

ಇಒ ಎಚ್.ಶಶಿಧರ, ನಿರ್ಮಿತಿಕೇಂದ್ರದ ಇಂಜಿನಿಯರ್ ಸಿದ್ದೇಶ್, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಮಂಗಳಾ, ಉಪಾಧ್ಯಕ್ಷ ಓಬಣ್ಣ, ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆ ತಿಪ್ಪೇಸ್ವಾಮಿ, ಕೆಡಿಪಿಸದಸ್ಯ ಅಂಗಡಿರಮೇಶ್, ಗ್ರಾಮ ಪಂಚಾಯಿತಿ ಸದಸ್ಯರಾದ ಎನ್. ಮಂಜುನಾಥ, ಎಂ.ಕುಮಾರಸ್ವಾಮಿ, ಎಂ.ಹಿದಾಯಿತ್‌ವುಲ್ಲಾ, ಪಾತಲಿಂಗಪ್ಪ, ಷಣ್ಮುಖಪ್ಪ, ಬಿ.ಸಿ.ಸತೀಶ್‌ಕುಮಾರ್, ಪಿಡಿಒ ಎಂ.ರಾಮಚಂದ್ರಪ್ಪ, ಶಲ್ಯದ್ಯಾಮಣ್ಣ, ರವಿಕುಮಾರ್, ಮೈನಬಾಬು, ದೇವರಾಜ, ಕೆ.ವೀರಭದ್ರಪ್ಪ, ರಾಜಣ್ಣ, ದೊಣ್ಣಪರೆಡ್ಡಿ ಮುಂತಾದವರು ಉಪಸ್ಥಿತರಿದ್ದರು.

---

**ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರಿಗೆ ನುಡಿನಮನ ಹಾಗೂ ಚಿಂತನಾ ಮಂಥನ ಕಾರ್ಯಕ್ರಮ**

## "ಸಿಂಗ್ ಅವರು ಬದುಕಿದ್ದಾಗ ತೆಗಳಿದ ಕೆಲವರು ಅವರು ನಿಧನರಾದಾಗ ಗುಣಗಾನ ಮಾಡಿದರು"

» ಹೊಸದುರ್ಗ




ವಿಶ್ವ ಆರ್ಥಿಕ ಸಂಕಷ್ಟ ಎದುರಿಸುತ್ತಿರುವಾಗ ಅಂದು ಮನಮೋಹನ್ ಸಿಂಗ್ ಅವರ ಸಲಹೆ ಪಡೆದಿದ್ದು ದೇಶದ ಹೆಮ್ಮೆ. ಅವರು ಈ ದೇಶದಲ್ಲಿ ಉತ್ತಮ ಆಡಳಿತ ನಡೆಸಿದ್ದಾರೆ. ದೇಶಕ್ಕೆ ಕಪ್ಪುಚುಕ್ಕೆ ತರುವಂತಹ ಯಾವ ಕೆಲಸವನ್ನು ಮಾಡಿಲ್ಲ. ಅವರು ಬದುಕಿದ್ದಾಗ ತೆಗಳಿದ ಕೆಲವರು ಅವರು ನಿಧನರಾದಾಗ ಗುಣಗಾನ ಮಾಡಿದರು. ಮನಮೋಹನ್ ಸಿಂಗ್ ಅವರು ಬಗ್ಗೆ ಕೀಳಾಗಿ ಮಾತನಾಡಿದವರೇ ಅವರನ್ನು ಹೊಗಳಿದರು ಅಂತಹ ವ್ಯಕ್ತಿತ್ವ ಮನಮೋಹನ್ ಸಿಂಗ್ ಅವರದು ಎಂದು ಗುಣಗಾನ ಮಾಡಿದರು ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಬೇಸರ ವ್ಯಕ್ತಪಡಿಸಿದರು.

ಹೆಜ್ಜೆ ಸಾಲು ಒಂದು ಸಾಂಸ್ಕೃತಿಕ ವೇದಿಕೆ ವತಿಯಿಂದ ಪಟ್ಟಣದ ದುರ್ಗಾಂಭಿಕ ದೇವಿ ಕಲ್ಯಾಣ ಮಂಟಪದಲ್ಲಿ ಶನಿವಾರ ಗೋ, ತಿಪ್ಪೇಶ್ ನೇತೃತ್ವದಲ್ಲಿ ಆಯೋಜಿಸಿದ್ದ 'ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರಿಗೆ ನುಡಿನಮನ ಹಾಗೂ ಚಿಂತನಾ ಮಂಥನ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಕಡ್ಡಾಯ ಶಿಕ್ಷಣ, ಆರೋಗ್ಯ, ಉದ್ಯೋಗ, ಮಾಹಿತಿ ಹಕ್ಕು ಕಾಯ್ದೆ ಸೇರಿದಂತೆ ಹತ್ತು ಹಲವು ಯೋಜನೆಗಳನ್ನು ರೂಪಿಸಿ, ಬಡವರ ಏಳಿಗೆಗಾಗಿ ಶ್ರಮಿಸಿದ ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರನ್ನು ಸದಾ ನೆನೆಯಬೇಕು ಎಂದರು.

ಆರ್ಥಿಕ ತಜ್ಞ ಜಿ.ಎಸ್. ಮಲ್ಲಿಕಾರ್ಜುನಪ್ಪ ಅವರು 'ಉದಾರೀಕರಣ ಮತ್ತು ಮನಮೋಹನ್ ಸಿಂಗ್ 'ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಹೆಜ್ಜೆ ಸಾಲು ಒಂದು ಸಾಂಸ್ಕೃತಿಕ ವೇದಿಕೆ ಅಧ್ಯಕ್ಷ ಗೋ. ತಿಪ್ಪೇಶ್, ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹೆಚ್ ಬಿಲ್ಲಪ್ಪ,ಕ.ಸಾ.ಪ ನಿಕಟ ಪೂರ್ವ ಅಧ್ಯಕ್ಷ ಧನಂಜಯಮೆಂಗಸಂದ್ರ ಕಾಂಗ್ರೆಸ್ ನಗರ ಘಟಕದ ಅಧ್ಯಕ್ಷ ಆಗ್ರೋ ಶಿವಣ್ಣ, ಕಸಾಪ ತಾಲ್ಲೂಕು ಅಧ್ಯಕ್ಷ ಬಿ.ಪಿ. ಓಂಕಾರಪ್ಪ ಮುಖಂಡರುಗಳಾದ ಈಶ್ವರಪ್ಪ, ವೀರಭದ್ರಪ್ಪ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು. ನಂತರ ನಡೆದ ಚಿಂತನ ಮಂಥನ ಕಾರ್ಯಕ್ರಮ ನಡೆಯಿತು. ಕಾರ್ಯಕ್ರಮಕ್ಕೂ ಮುನ್ನ ಮನಮೋಹನ್ ಸಿಂಗ್ ಅವರ ಬಾವ ಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು.



ಕುಮ್ಮಿನಘಟ್ಟ ಗ್ರಾಮದಲ್ಲಿ 2 ಕೋಟಿ ಹತ್ತು ಲಕ್ಷ ರೂ.ವೆಚ್ಚದಲ್ಲಿ ನೂತನ ಚೆಕ್‌ಡ್ಯಾಂ ನಿರ್ಮಾಣ ಕಾಮಗಾರಿಗೆ ಶಾಸಕ ಡಾ.ಎಂ.ಚಂದ್ರಪ್ಪ ಭೂಮಿಪೂಜೆ ಸಲ್ಲಿಸಿದರು.

---

## ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಶಿಕ್ಷಣದ ಬಗ್ಗೆ ಉದಾಸೀನತೆ ಸಲ್ಲದು




» ಚಳ್ಳಕೆರೆ

ವಿದ್ಯಾರ್ಥಿಗಳು ಸಮಯವನ್ನು ವ್ಯರ್ಥಮಾಡದೆ ಕಲಿಕೆಯಲ್ಲಿ ಹೆಚ್ಚು ಆಸಕ್ತಿ ವಹಿಸಬೇಕು. ನೀವು ಕಲಿಯುವ ಶಿಕ್ಷಣ ನಿಮ್ಮ ಬದುಕಿಗೆ ಭದ್ರವಾದ ಭವಿಷ್ಯವನ್ನು ನಿರೂಪಿಸಲಿದೆ. ಶಿಕ್ಷಣದಿಂದ ಮಾತ್ರ ಅಭಿವೃದ್ಧಿಪಥದತ್ತ ಹೆಜ್ಜೆ ಇಡಬಹುದು ಎಂದು ಜಾನಪದ ವಿದ್ವಾಂಸ, ನಿವೃತ್ತ ಪ್ರಾಂಶುಪಾಲ ಡಾ.ಮೀರಸಾಬಿಹಳ್ಳಿ ಶಿವಣ್ಣ ತಿಳಿಸಿದರು. ಅವರು, ನಗರದ ಕುವೆಂಪು ವಿದ್ಯಾಸಂಸ್ಥೆಯಲ್ಲಿ ವಿಶ್ವಮಾನವ ದಿನಾಚರಣೆ ಹಾಗೂ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಕನ್ನಡ ಸಾಹಿತ್ಯಕ್ಕೆ ವಿಶೇಷ ಮೆರಗುತಂದುಕೊಟ್ಟ ಕೀರ್ತಿ ತರಾಸುರವರದ್ದು. ಕುವೆಂಪುರವರ ಗುರುವಾದ ತರಾಸು ಜನ್ಮತಾಳಿದ್ದು ನಮ್ಮ ತಾಲ್ಲೂಕಿನ ತಳಕು ಗ್ರಾಮದಲ್ಲಿ ಆದ್ದರಿಂದ ಕನ್ನಡ ಸಾಹಿತ್ಯಕ್ಕೆ ಚಳ್ಳಕೆರೆಯ ಕೊಡುಗೆ ಅಪಾರವಾಗಿದೆ. ಕುವೆಂಪುರವರ ಸಾಹಿತ್ಯ ಕನ್ನಡ ಭಾಷೆಯನ್ನು ಮತ್ತಷ್ಟು ಗಟ್ಟಿಯಾಗಿ ಬೇರೂರಲು ಸಹಕರಿಯಾಗಿದೆ. ಪ್ರತಿಯೊಬ್ಬ ವ್ಯಕ್ತಿಯ ಬದುಕಿನಲ್ಲಿ ಆತ್ಮವಿಶ್ವಾಸಹುಟ್ಟುಹಾಕುವಂತಹ ಸಾಹಿತ್ಯ ಕುವೆಂಪುರವರದ್ದು ಎಂದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಸರ್ಕಾರ ಶಾಲಾ ಹಂತದಲ್ಲೇ ಮಕ್ಕಳಿಗೆ ಕಲಿಕೆಗೆ ಅಗತ್ಯವಿರುವ ಎಲ್ಲಾ ಸೌಲಭ್ಯಗಳನ್ನು ಒದಗಿಸುತ್ತಾ ಬಂದಿದೆ. ಶಾಲೆಗಳಲ್ಲಿ ಮಕ್ಕಳಿಗೆ ಗುಣಾತ್ಮಕ ಶಿಕ್ಷಣ ನೀಡುವ ನಿಟ್ಟಿನಲ್ಲಿ ವಿದ್ಯಾಸಂಸ್ಥೆಗಳೂ ಸಹ ಮುಂಚೂಣಿಯಲ್ಲಿವೆ. ಖಾಸಗಿ ವಿದ್ಯಾಸಂಸ್ಥೆಗಳು ಮಕ್ಕಳ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಬೇಕೆಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ನಿರ್ದೇಶಕ ಎಲ್. ಷಣ್ಮುಖಪ್ಪ ವಹಿಸಿದ್ದರು. ನಿರ್ದೇಶಕರಾದ ಡಾ.ಸಿ.ಶಿವಲಿಂಗಪ್ಪ, ಎನ್.ಎಂ.ಕೃಷ್ಣಮೂರ್ತಿ, ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಮಭರಮಯ್ಯ, ಸದಸ್ಯೆ ಪಾಲಮ್ಮ, ಆರ್.ಕೃಷ್ಣಮೂರ್ತಿ, ಎಲ್. ವೆಂಕಟಪ್ಪ, ಎಚ್.ಆರ್.ತುಳಸಿಕುಮಾರ್, ಜಿ.ಟಿ.ನಿರಂಜನ್, ಆಡಳಿತಾಧಿಕಾರಿ ವಿ.ತಿಪ್ಪೇಸ್ವಾಮಿ ಮುಖ್ಯೋಪಾಧ್ಯಾಯ ಎನ್. ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

---

**ಪ್ರಮುಖ ಸುದ್ದಿ**

**ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ವಿವಿಧ ಘಟಕಗಳ ಸಮಾರೋಪ ಸಮಾರಂಭ**

# ಆಸಕ್ತಿಯಿಂದ ಶಿಕ್ಷಣ ಕಲಿತು ಉಜ್ವಲಬದುಕನ್ನು ನಿರೂಪಿಸಿಕೊಳ್ಳಿ

» ಚಳ್ಳಕೆರೆ



ಸರ್ಕಾರ ವಿದ್ಯಾರ್ಥಿಗಳ ಭವಿಷ್ಯವನ್ನು ಉತ್ತಮವಾಗಿ ನಿರೂಪಿಸುವ ದೃಷ್ಠಿಯಿಂದ ಸೌಲಭ್ಯಗಳನ್ನು ನೀಡಿ ವಿದ್ಯಾರ್ಥಿಗಳ ಕಲಿಕೆಗೆ ಅವಕಾಶ ಮಾಡಿಕೊಟ್ಟಿದೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಭವಿಷ್ಯವನ್ನು ರೂಪಿಸಿಕೊಳ್ಳುವ ಸಾಮರ್ಥ್ಯವನ್ನು ಶಿಕ್ಷಣದಿಂದ ಮಾತ್ರ ಪಡೆಯುತ್ತಾನೆ. ನೀವು ಪಡೆಯುವ ಇಂದಿನ ಶಿಕ್ಷಣ ನಿಮ್ಮ ಬದುಕಿನ ಗುರುಸಾಧನೆಗೆ ರಹದಾರಿಯಾಗಲಿದೆ. ಆದ್ದರಿಂದ ಪ್ರತಿಯೊಬ್ಬರೂ ಕಲಿಕೆಯಲ್ಲಿ ನಿರಾಸಕ್ತಿಹೊಂದದೆ ಆಸಕ್ತಿಯಿಂದ ಶಿಕ್ಷಣ ಪಡೆಯಬೇಕೆಂದು ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷ, ಶಾಸಕ, ಸಣ್ಣಕೈಗಾರಿಕೆ ಅಭಿವೃದ್ಧಿಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ಸರ್ಕಾರಿ ಪದವಿಪೂರ್ವ ಕಾಲೇಜು ಆವರಣದಲ್ಲಿ ಕ್ರೀಡಾ,ಸಾಂಸ್ಕೃತಿಕ,ಎನ್‌ಎಸ್‌ಎಸ್ ಹಾಗೂ ರೋವರ್ಸ್ ಅಂಡ್ ರೇಂಜರ್ಸ್ ಘಟಕಗಳ ಸಮಾರೋಪ ಸಮಾರಂಭ ಹಾಗೂ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಪ್ರಸ್ತುತ ಸರ್ಕಾರಿ ಪದವಿಪೂರ್ವ ಕಾಲೇಜಿನ ಬಹುತೇಕ ಬೇಡಿಕೆಗಳನ್ನು ಈಡೇರಿಸುವಲ್ಲಿ ಯಶಸ್ವಿಯಾಗಿದ್ದೇನೆ. ಕಾಲೇಜು ಆಡಳಿತಮಂಡಳಿ ಆಡಿಟೋರಿಯಂ, ಶುದ್ದನೀರಿನ ಘಟಕ ನಿರ್ಮಿಸಿಕೊಡುವಂತೆ ಮನವಿ ಮಾಡಿದ್ದಾರೆ. ಮುಂದಿನ ದಿನಗಳಲ್ಲಿ ಶಾಸಕರ ಅನುದಾನದಲ್ಲಿ ಹಂತ, ಹಂತವಾಗಿ ವ್ಯವಸ್ಥೆ ಮಾಡಲಾಗುವುದು. ಸರ್ಕಾರದ ಸೌಲಭ್ಯಗಳನ್ನು ನೀಡುವ ನಿಟ್ಟಿನಲ್ಲಿ ಯಾವುದೇ ಹಿಂದೇಟು ಹಾಕುವುದಿಲ್ಲ. ಆದರೆ, ನನಗೆ ಕಾಲೇಜಿನ ಫಲಿತಾಂಶ ಉತ್ತಮವಾಗಬೇಕಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿದ್ದು, ಪ್ರಾಧ್ಯಾಪಕರು ಈ ಬಗ್ಗೆ ಹೆಚ್ಚು ಗಮನಹರಿಸಬೇಕು ಎಂದರು.

ಸಮಾರೋಪ ಸಮಾರಂಭವನ್ನು ಉದ್ದೇಶಿಸಿ ಮಾತನಾಡಿದ ಹಿರಿಯಸಾಹಿತಿ ಬಿ.ತಿಪ್ಪಣ್ಣಮರಿಕುಂಟೆ, ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಕನಸನ್ನು ನನಸು ಮಾಡಿಕೊಳ್ಳಲು ಕಾಲೇಜು ಶಿಕ್ಷಣ ಉತ್ತಮ ಅಡಿಪಾಯವಾಗಿದೆ. ಎಲ್ಲಾ ವಿದ್ಯಾರ್ಥಿಗಳಲ್ಲಿ ಪ್ರತಿಭೆ ಇದ್ದರೂ ಅವುಗಳನ್ನುಹೊರತರುವವ್ಯವಸ್ಥೆಆಗುತ್ತಿಲ್ಲ. ಆದರೆ, ಕಾಲೇಜಿನಲ್ಲಿ ಮಾತ್ರ ಇಂತಹ ಪ್ರತಿಭೆಗಳನ್ನು ಗುರುತಿಸಿ, ಗೌರವಿಸುವ ಕೆಲಸ ನಿರಂತರ ನಡೆಯುತ್ತಾ ಬಂದಿದೆ. ವಿದ್ಯಾರ್ಥಿಗಳು ಶೈಕ್ಷಣಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು. ನಿಮ್ಮ ಆಸಕ್ತಿ ನಿಮಗೆ ವರವಾಗಿ ಪರಿಣಮಿಸುವ ಕಾರ್ಯವಾಗಬೇಕೆಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲ ಕೆ.ತಿಮ್ಮಯ್ಯ ವಹಿಸಿದ್ದರು. ಸಾಹಿತಿ ಪಗಡಲಬಂಡೆ ನಾಗೇಂದ್ರಪ್ಪ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಸಿ.ಟಿ.ವೀರೇಶ್, ಬಿ.ಫರೀದ್‌ಖಾನ್, ಎಂ.ರವೀಶ್‌ರವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ನಗರಸಭಾ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಮ, ಪಿಯು ನಿರ್ದೇಶಕ ಆರ್.ಪುಟ್ಟಸ್ವಾಮಿ, ಎಂ.ಶ್ರೀನಿವಾಸ್, ಎಸ್.ಎಲ್.ಶಶಿಕಲಾಸುರೇಶ್, ಕಾಲೇಜು ಅಭಿವೃದ್ಧಿ ಸಮಿತಿ ಸದಸ್ಯರಾದ ಟಿ.ರುದ್ರಮುನಿ, ಎಸ್. ಕೋಣಪ್ಪ, ವಸಂತಕುಮಾರ್, ನಾಗರಾಜಬೆಳಗಟ್ಟ, ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿ, ಲಲಿತಮ್ಮ, ಕೆ.ವಿ.ಚಂದ್ರಶೇಖರ್, ಉಪನ್ಯಾಸಕ ಸಂಘದ ಮಾಜಿ ಜಿಲ್ಲಾಧ್ಯಕ್ಷ ಎಸ್.ಲಕ್ಷ್ಮಣ್, ಗದ್ದಿಗೆತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T